ಸಂಪುಟ : 11 ಸಂಚಿಕೆ: 66 ಪುಟ : 4+2 ಬೆಲೆ: 3.00 ಶನಿವಾರ ಎಪ್ರಿಲ್ 11 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 66 Pages : 4+2 Price : 3.00 Saturday April 11 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರದಲ್ಲಿ ಎಪ್ರಿಲ್ 14ರಂದು ಸಂಭ್ರಮಾಚರಣೆ – ಸಾರ್ವಜನಿಕರಿಗೆ ಆಹ್ವಾನ

## ಏ.14ರಂದು ಜಗಜೀವನರಾಂ-ಅಂಬೇಡ್ಕರ್ ಜಯಂತಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಂ ಅವರ 119ನೇ ಹಾಗೂ ಸಂವಿಧಾನ ಶಿಲ್ಪಿ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಎಪ್ರಿಲ್ 14, 2026ರಂದು ಜಿಲ್ಲೆಯ ವಿವಿಧ ಭಾಗಗಳಲ್ಲಿ ಭವ್ಯವಾಗಿ ಆಚರಿಸಲು ಸಿದ್ಧತೆಗಳು ನಡೆಯುತ್ತಿವೆ.

**ಶಿರಹಟ್ಟಿಯಲ್ಲಿ ಮೆರವಣಿಗೆ:** ಬೆಳಿಗ್ಗೆ 9.00 ಗಂಟೆಗೆ ಶಿರಹಟ್ಟಿಯ ಶ್ರೀ ಜಗದ್ಗುರು ಫಕ್ಕೀರೇಶ್ವರ ಮಠದಿಂದ ಮಹಾನಾಯಕರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ ಮೆರವಣಿಗೆ ಆರಂಭವಾಗಲಿದೆ. ಗಾಂಧಿ ಸರ್ಕಲ್, ಬಸವೇಶ್ವರ ಸರ್ಕಲ್, ಸಂಗೊಳ್ಳಿ ರಾಯಣ್ಣ ಸರ್ಕಲ್, ಡಾ. ಬಿ.ಆರ್. ಅಂಬೇಡ್ಕರ್ ಸರ್ಕಲ್ ಹಾಗೂ ನೆಹರು ಸರ್ಕಲ್ ಮುಖಾಂತರ ಸಂಚರಿಸಿ ತಹಸೀಲ್ದಾರ್ ಕಚೇರಿ ಆವರಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.

**ಲಕ್ಷ್ಮೇಶ್ವರದಲ್ಲಿ ಕಾರ್ಯಕ್ರಮ:** ಅದೇ ದಿನ ಲಕ್ಷ್ಮೇಶ್ವರ ಪಟ್ಟಣದ ತೇರಿನ ಮನೆಯಿಂದ ಕಲಾತಂಡದೊಂದಿಗೆ ಮೆರವಣಿಗೆ ಪ್ರಾರಂಭವಾಗಿ ಅಂಬೇಡ್ಕರ್ ಸರ್ಕಲ್, ಶಿಗ್ಲಿ ನಾಕಾ, ಪಾದಗಟ್ಟಿ, ಹಾವಳಿ ಆಂಜನೇಯ ದೇವಸ್ಥಾನ ಹಾಗೂ ವಿದ್ಯಾರಣ್ಯ ಸರ್ಕಲ್ ಮಾರ್ಗವಾಗಿ ಚನ್ನಮ್ಮನ ವನದಲ್ಲಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮಗಳಲ್ಲಿ ಗಣ್ಯರು, ದಲಿತ ಸಂಘರ್ಷ ಸಮಿತಿಯ ಸದಸ್ಯರು, ಸಾರ್ವಜನಿಕರು, ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಶಿರಹಟ್ಟಿ ತಹಸೀಲ್ದಾರ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಮನವಿ ಮಾಡಿದ್ದಾರೆ.

### ವೃಕ್ಷೋದ್ಯಾನವನ ಲೋಕಾರ್ಪಣೆ ವೇಳೆ ಸಚಿವ ಡಾ. ಹೆಚ್.ಕೆ. ಪಾಟೀಲ ಹೇಳಿಕೆ- ಪ್ರವಾಸಿ ತಾಣವಾಗಿ ರೂಪಿಸುವ ಭರವಸೆ

# "ಶಾಸಕ ಜಿ.ಎಸ್. ಪಾಟೀಲ ಸಚಿವ ಸ್ಥಾನಕ್ಕೆ ಅರ್ಹ"



> "ಶಾಸಕ ಜಿ.ಎಸ್. ಪಾಟೀಲ ಸಚಿವ ಸ್ಥಾನಕ್ಕೆ ಅತ್ಯಂತ ಅರ್ಹ ವ್ಯಕ್ತಿ. ಅವರ ಚಿಂತನೆ, ಅಭಿವೃದ್ಧಿ ಕಾರ್ಯಗಳು ಮತ್ತು ಬಡವರ ಪರವಾದ ಕಾಳಜಿ ಗಮನಾರ್ಹವಾಗಿದೆ."
>
> – **ಡಾ. ಹೆಚ್.ಕೆ. ಪಾಟೀಲ,** ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ.

**■ವಿಜಯಸಾಕ್ಷಿ ಸುದ್ದಿ, ರೋಣ**

ಜಿಗಳೂರ ಕೆರೆಯ ಅಭಿವೃದ್ಧಿಗೆ ಮತ್ತೆ 1 ಕೋಟಿ ಅನುದಾನ ಬಿಡುಗಡೆಗೊಂಡಿದ್ದು, ಈ ಕೆರೆಯನ್ನು ಸುಂದರ ಪ್ರವಾಸಿ ತಾಣವನ್ನಾಗಿ ರೂಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಪ್ರವಾಸೋದ್ಯಮ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಡಾ. ಹೆಚ್.ಕೆ. ಪಾಟೀಲ ಹೇಳಿದರು. ಜೊತೆಗೆ ಶಾಸಕ ಜಿ.ಎಸ್. ಪಾಟೀಲ ಸಚಿವ ಸ್ಥಾನಕ್ಕೆ ಅತ್ಯಂತ ಅರ್ಹ ವ್ಯಕ್ತಿ ಎಂದು ಅವರು ಅಭಿಪ್ರಾಯ ಪಟ್ಟರು.

ತಾಲೂಕಿನ ಜಿಗಳೂರ ಬಳಿಯ ಕೆರೆ ತಟದಲ್ಲಿ ನಿರ್ಮಿಸಲಾದ ಸಾಲುಮರದ ತಿಮ್ಮಕ್ಕ ವೃಕ್ಷೋದ್ಯಾನವನವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಗದಗ ಜಿಲ್ಲೆಯಲ್ಲಿ ಅನೇಕ ಪ್ರವಾಸಿ ತಾಣಗಳಿದ್ದರೂ ಅವುಗಳನ್ನು ಗುರುತಿಸುವಲ್ಲಿ ಹಿಂದೆ ಬಿದ್ದಿದ್ದೇವೆ. ಆದರೆ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಕಪ್ಪತ್ತಗುಡ್ಡ, ಲಕ್ಕುಂಡಿ, ಗಜೇಂದ್ರಗಡ, ಸೂಡಿ ಸೇರಿದಂತೆ ಹಲವು ತಾಣಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಜಿಗಳೂರ ಕೆರೆ ತಟದಲ್ಲಿ ನಿರ್ಮಿತವಾದ ವೃಕ್ಷೋದ್ಯಾನವನದಲ್ಲಿ ಅನೇಕ ಕಾಮಗಾರಿಗಳು ಪೂರ್ಣಗೊಂಡಿದ್ದು, ಸಾರ್ವಜನಿಕರು ಕುಟುಂಬ ಸಮೇತ ವೀಕ್ಷಿಸಲು ಅನುಕೂಲವಾಗುವಂತೆ ವ್ಯವಸ್ಥೆ ಮಾಡಲಾಗಿದೆ. ಮಕ್ಕಳಿಗಾಗಿ ಆಟೋಪಕರಣಗಳನ್ನೂ ಅಳವಡಿಸಲಾಗಿದ್ದು, ಇದು ಶಾಲಾ ವಿದ್ಯಾರ್ಥಿಗಳಿಗೆ ಪಿಕ್ನಿಕ್ ತಾಣವಾಗಿ ಪರಿಣಮಿಸಲಿದೆ ಎಂದರು.

ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ರೋಣದಲ್ಲಿ ಕುಟುಂಬ ಸಮೇತ ವೀಕ್ಷಿಸಲು ತಾಣಗಳ ಕೊರತೆ ಇನ್ನು ಮುಂದೆ ಇರುವುದಿಲ್ಲ. ಕೆರೆ ಅಭಿವೃದ್ಧಿಗೆ ಮತ್ತಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದ್ದು, ಬೋಟಿಂಗ್ ವ್ಯವಸ್ಥೆ ಕೂಡ ಶೀಘ್ರದಲ್ಲಿ ಆರಂಭವಾಗಲಿದೆ ಎಂದು ಹೇಳಿದರು.

ಇದೇ ವೇಳೆ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ 38 ಕೋಟಿ ವೆಚ್ಚದಲ್ಲಿ ವಸತಿ ನಿಲಯ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಲಾಗಿದೆ. ಕಾರ್ಮಿಕರ ಹಿತಕ್ಕಾಗಿ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳ ಸದುಪಯೋಗ ಪಡೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಬಿ.ಆರ್. ಯಾವಗಲ್, ಮಾಜಿ ಶಾಸಕರಾದ ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಕಸಾಪದಲ್ಲಿ ಸದಾನಂದ ಪಿಳ್ಳಿ ದತ್ತಿ ಉಪನ್ಯಾಸ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಎಪ್ರಿಲ್ 11, 2026ರಂದು ಸಂಜೆ 6.30 ಗಂಟೆಗೆ ನಗರದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿರುವ ಕಸಾಪ ಕಾರ್ಯಾಲಯದಲ್ಲಿ ಕಾಯಕ ಜೀವಿ ಸದಾನಂದ ಪಿಳ್ಳಿ ಸ್ಮರಣಾರ್ಥ ದತ್ತಿ ಉಪನ್ಯಾಸ ಹಾಗೂ ಸನ್ಮಾನ ಕಾರ್ಯಕ್ರಮ ಏರ್ಪಡಿಸಲಾಗಿದೆ.

"ವಿಶ್ವಗುರು ಬಸವಣ್ಣ – ಕರ್ನಾಟಕದ ಸಾಂಸ್ಕೃತಿಕ ನಾಯಕ" ವಿಷಯವಾಗಿ ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷರಾದ ಸುಧಾ ಹುಚ್ಚಣ್ಣವರ ಉಪನ್ಯಾಸ ನೀಡಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ವಹಿಸಲಿದ್ದು, ಪ್ರಶಸ್ತಿ ಪುರಸ್ಕೃತ ಪತ್ರಕರ್ತ ಶಿವಾನಂದ ಹಿರೇಮಠರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಗುವುದು.

ಮುಖ್ಯ ಅತಿಥಿಗಳಾಗಿ ನಿವೃತ್ತ ಶಿಕ್ಷಕರಾದ ಬಸವರಾಜ ಪಿಳ್ಳಿ ಭಾಗವಹಿಸಲಿದ್ದು, ದತ್ತಿದಾನಿಗಳಾದ ಸುರೇಖಾ ಸದಾನಂದ ಪಿಳ್ಳಿ ಉಪಸ್ಥಿತರಿರುವರು. ಸಾಹಿತ್ಯಾಭಿಮಾನಿಗಳು, ಸಾಹಿತಿಗಳು ಹಾಗೂ ಪರಿಷತ್ತಿನ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ ಹಾಗೂ ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ಶಿರಹಟ್ಟಿಯಲ್ಲಿ ಜನಸಂಪರ್ಕ ಸಭೆ – ಅಧಿಕಾರಿಗಳಿಗೆ ಪಾರದರ್ಶಕ ಆಡಳಿತಕ್ಕೆ ಡಿವೈಎಸ್‌ಪಿ ಬಿರಾದಾರ ಸೂಚನೆ

# "ಹಣಕ್ಕೆ ಡಿಮ್ಯಾಂಡ್ ಮಾಡಿದರೆ ದೂರು ನೀಡಿ"



> "ಯಾರಾದರೂ ಹಣಕ್ಕಾಗಿ ಒತ್ತಾಯಿಸಿದರೆ ಅಥವಾ ಬ್ಲಾಕ್‌ಮೇಲ್ ಮಾಡಿದರೆ ತಕ್ಷಣ ದೂರು ನೀಡಿ – ಲೋಕಾಯುಕ್ತ ನಿಮ್ಮ ಜೊತೆ ಇದೆ."
>
> – **ವಿಜಯಕುಮಾರ ಬಿರಾದಾರ,** ಡಿಎಸ್‌ಪಿ, ಲೋಕಾಯುಕ್ತ.

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಸಾರ್ವಜನಿಕ ಸೇವೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳಿಗೆ ಯಾರಾದರೂ ಹಣಕ್ಕಾಗಿ ಒತ್ತಾಯಿಸಿದರೆ, ಅಥವಾ ವಿಡಿಯೋ ತೆಗೆದು ಬ್ಲಾಕ್‌ಮೇಲ್ ಮಾಡಿದರೆ ತಕ್ಷಣ ಲೋಕಾಯುಕ್ತಕ್ಕೆ ದೂರು ನೀಡಬಹುದು ಎಂದು ಗದಗ ಲೋಕಾಯುಕ್ತ ಡಿಎಸ್‌ಪಿ ವಿಜಯಕುಮಾರ ಬಿರಾದಾರ ತಿಳಿಸಿದರು.

ಶುಕ್ರವಾರ ಶಿರಹಟ್ಟಿಯ ತಹಸೀಲ್ದಾರ್ ಕಚೇರಿಯಲ್ಲಿ ಆಯೋಜಿಸಲಾದ ಲೋಕಾಯುಕ್ತ ಜನಸಂಪರ್ಕ ಸಭೆಯಲ್ಲಿ ಇಲಾಖಾವಾರು ಚರ್ಚೆ ನಡೆಸಿ ಅವರು ಮಾತನಾಡಿದರು.

ಅಧಿಕಾರಿಗಳು ತಮ್ಮ ಕರ್ತವ್ಯ ಮತ್ತು ಜವಾಬ್ದಾರಿಯ ಮಿತಿಯೊಳಗೆ ಕೆಲಸ ಮಾಡಿ ಸಾರ್ವಜನಿಕರ ಕಾರ್ಯಗಳನ್ನು ತ್ವರಿತವಾಗಿ ನೆರವೇರಿಸಬೇಕು. ಅನಗತ್ಯವಾಗಿ ಜನರನ್ನು ಸತಾಯಿಸಬಾರದು ಎಂದು ಅವರು ಸೂಚಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ವಾರಸಾ ಪ್ರಕರಣಗಳಲ್ಲಿ ಲೋಪದೋಷಗಳು ಕಾಣಿಸುತ್ತಿದ್ದು, ಸ್ಥಳ ಪರಿಶೀಲನೆ ನಡೆಸಿ ಅರ್ಹರಿಗೆ ಅನ್ಯಾಯವಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ತಹಸೀಲ್ದಾರ್‌ಗೆ ಸೂಚಿಸಿದರು.

ಗ್ರಾಮ ಪಂಚಾಯಿತಿಗಳಲ್ಲಿ ಸಲ್ಲಿಕೆಯಾಗುವ ಅರ್ಜಿಗಳಿಗೆ ಕಡ್ಡಾಯವಾಗಿ ಸ್ವೀಕೃತಿ ಪತ್ರ ನೀಡಬೇಕು ಎಂದು ಹೇಳಿದರು.

ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ನೀಡುವ ಕುಡಿಯುವ ನೀರಿನ ಗುಣಮಟ್ಟವನ್ನು ಪರಿಶೀಲಿಸಬೇಕು. ಕೆಲವು ಕಡೆಗಳಲ್ಲಿ ಅವಧಿ ಮೀರಿದ ಔಷಧಿಗಳು ಕಂಡುಬರುತ್ತಿದ್ದು, ಇಂತಹ ದೋಷಗಳನ್ನು ತಕ್ಷಣ ಸರಿಪಡಿಸಬೇಕು ಎಂದು ತಿಳಿಸಿದರು.

ಶಿಕ್ಷಣ ಕ್ಷೇತ್ರದ ಬಗ್ಗೆ ಮಾತನಾಡಿದ ಅವರು, ಪ್ರಾಥಮಿಕ ಹಂತದಲ್ಲಿ ಗುಣಮಟ್ಟದ ಶಿಕ್ಷಣ ಕೊರತೆಯಿಂದ ಪಿಯುಸಿಯಲ್ಲಿ ವಿದ್ಯಾರ್ಥಿಗಳು ಉತ್ತಮ ಅಂಕ ಗಳಿಸಲು ಸಾಧ್ಯವಾಗುತ್ತಿಲ್ಲ. ಖಾಸಗಿ ಶಾಲೆಗಳ ಶಿಕ್ಷಕರು ಕಡಿಮೆ ವೇತನ ಪಡೆದರೂ ಉತ್ತಮ ಫಲಿತಾಂಶ ನೀಡುತ್ತಿದ್ದಾರೆ. ಸರ್ಕಾರಿ ಶಾಲೆಗಳ ಶಿಕ್ಷಕರು ಇಚ್ಛಾಶಕ್ತಿಯಿಂದ ಕಾರ್ಯನಿರ್ವಹಿಸಿ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಬೇಕು ಎಂದು ಹೇಳಿದರು.

ಕಡಿಮೆ ಪ್ರಗತಿ ಸಾಧಿಸುವ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ನಡೆಸಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಫಲಿತಾಂಶವನ್ನು ಸುಧಾರಿಸಲು ಕ್ರಮ ಕೈಗೊಳ್ಳಬೇಕು ಎಂದು ಸಿಆರ್‌ಪಿ ಹಾಗೂ ಬಿಆರ್‌ಪಿಗಳಿಗೆ ಸೂಚಿಸಿದರು.


ಸಭೆಯಲ್ಲಿ ತಹಸೀಲ್ದಾರ್ ರಾಘವೇಂದ್ರ ರಾವ್, ತಾಪಂ ಇಒ ಆರ್.ವಿ. ದೊಡ್ಡಮನಿ, ಗ್ರೇಡ್-2 ತಹಸೀಲ್ದಾರ್ ಎ.ಎ. ಮುಳಗುಂದಮಠ, ಪಿಎಸ್‌ಐ ಈರಪ್ಪ ರಿತ್ತಿ, ಸಿಡಿಪಿಓ ಮೃತ್ಯುಂಜಯ ಗುಡ್ಡದಾನ್ವೇರಿ, ಟಿಎಚ್‌ಒ ಡಾ. ಸುಭಾಸ್ ದೈಗೊಂಡ, ಬಿಇಒ ಎಚ್.ಎನ್. ನಾಯ್ಕ, ಆರ್‌ಎಫ್‌ಒ ರಾಮಪ್ಪ ಪೂಜಾರ, ಸಮಾಜ ಕಲ್ಯಾಣಾಧಿಕಾರಿ ಗೋಪಾಲ ನಾಯ್ಕ, ಉಪನೋಂದಣಾಧಿಕಾರಿ ಶರಣಪ್ಪ ಪವಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಹಿನ್ನಡೆ ನಡುವೆಯೂ ಬಾಲಕಿಯರ ಮೇಲುಗೈ; ಕಲಾ, ವಾಣಿಜ್ಯ, ವಿಜ್ಞಾನದಲ್ಲಿ ಅಗ್ರ ಸಾಧನೆ

## ಜಿಲ್ಲೆಯ ಪಿಯು ಸಾಧಕರು – ಕುಸಿತದಲ್ಲೂ ಮಿಂಚಿದ ಪ್ರತಿಭೆಗಳು



> "ಪಿಯು ಫಲಿತಾಂಶ ಕುರಿತು ಡಿಡಿಪಿಯು ಸಮಗ್ರ ಮಾಹಿತಿ ನೀಡಲೇಬೇಕು. ತಪ್ಪು ಮಾಹಿತಿ ನೀಡಿದರೆ ತಪ್ಪು ಸಂದೇಶ ಹೋಗುತ್ತದೆ. ಕರ್ತವ್ಯ ಲೋಪ ಹಿನ್ನೆಲೆಯಲ್ಲಿ ನೋಟಿಸ್ ನೀಡಲಾಗಿದೆ"
>
> – **ಸಿ.ಎನ್. ಶ್ರೀಧರ್,** ಜಿಲ್ಲಾಧಿಕಾರಿ.



**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟವಾಗಿದ್ದು, ಈ ಬಾರಿ ಗದಗ ಜಿಲ್ಲೆ ಮತ್ತೆ ಹಿನ್ನಡೆ ಅನುಭವಿಸಿದೆ. ಕಳೆದ ವರ್ಷ ಅಲ್ಪ ಏರಿಕೆ ಕಂಡಿದ್ದ ಫಲಿತಾಂಶ ಈ ಬಾರಿ ಕುಸಿದಿದ್ದರೂ, ಕೆಲವು ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳನ್ನು ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಈ ಬಾರಿ ಕೂಡ ಜಿಲ್ಲೆಯ ಫಲಿತಾಂಶದಲ್ಲಿ ಬಾಲಕಿಯರೇ ಮೇಲುಗೈ ಸಾಧಿಸಿದ್ದು, ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮೂರು ವಿಭಾಗಗಳಲ್ಲೂ ವಿದ್ಯಾರ್ಥಿನಿಯರೇ ಪ್ರಥಮ ಸ್ಥಾನ ಪಡೆದಿದ್ದಾರೆ.

**ಕಲಾ ವಿಭಾಗ:** ಗಜೇಂದ್ರಗಡ ತಾಲೂಕಿನ ನರೇಗಲ್ ಪಟ್ಟಣದ ಎಸ್‌ಎ ಪಿಯು ಕಾಲೇಜಿನ ವಿದ್ಯಾರ್ಥಿನಿ ಹುಲಿಗೆಮ್ಮ 589 ಅಂಕಗಳೊಂದಿಗೆ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ.

ಲಕ್ಷ್ಮೇಶ್ವರದ ಎಸ್‌ಎಂಜಿವಿಜಿ ಕಾಲೇಜಿನ ರೋಹಿಣಿ ಬೆಟಗೇರಿ 584 ಅಂಕಗಳೊಂದಿಗೆ ದ್ವಿತೀಯ ಸ್ಥಾನ, ಮುಂಡರಗಿ ತಾಲೂಕಿನ ಕಲಕೇರಿ ಗ್ರಾಮದ ಎಂ.ಬಿ. ಪಾಟೀಲ ಪಿಯು ಕಾಲೇಜಿನ ಮಂಜುಳಾ ಹುಳಕಣ್ಣವರ 582 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ.

**ವಿಜ್ಞಾನ ವಿಭಾಗ:** ಗದಗ ನಗರದ ಸರಕಾರಿ ಪಿಯು ಕಾಲೇಜಿನ ಸಮೃದ್ಧಿ ಸಿದ್ಧಲಿಂಗ 591 (ಶೇ. 98.4) ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ.

ಸನ್ಮಾರ್ಗ ಪಿಯು ಕಾಲೇಜಿನ ಕಿರಣ ಹಿರೇಮಠ 590 ಅಂಕಗಳೊಂದಿಗೆ ▸▸4ನೇ ಪುಟಕ್ಕೆ

### ಹೋಟೆಲ್ ಒಡೆಯರ ಸಂಘದ ನೂತನ ಕಟ್ಟಡ ಉದ್ಘಾಟನೆ; ಪ್ರವಾಸೋದ್ಯಮ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ-ಸಚಿವ ಡಾ. ಹೆಚ್.ಕೆ. ಪಾಟೀಲ

# "ಉತ್ತರ ಕರ್ನಾಟಕದ ಆಹಾರ ಪರಂಪರೆ ಉಳಿಸಬೇಕು"




**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರವಾಸೋದ್ಯಮ ಬೆಳವಣಿಗೆಯಲ್ಲಿ ಹೋಟೆಲ್ ಉದ್ಯಮದ ಪಾತ್ರ ಮಹತ್ವದ್ದಾಗಿದ್ದು, ಸ್ಥಳೀಯ ಆಹಾರ ಸಂಸ್ಕೃತಿಯನ್ನು ಉಳಿಸುವ ಜವಾಬ್ದಾರಿಯೂ ಹೋಟೆಲ್ ಕ್ಷೇತ್ರದ ಮೇಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಅವರು, ನಗರದ ಹೊಸ ಬಸ್ ನಿಲ್ದಾಣದ ಎದುರು ಹೋಟೆಲ್ ಒಡೆಯರ ಸಂಘದ ನೂತನ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದರು.

ಹೋಟೆಲ್ ಕ್ಷೇತ್ರವು ಕೇವಲ ವ್ಯವಹಾರ ಮಾತ್ರವಲ್ಲದೆ ಸಮಾಜ ಸೇವೆಯ ಒಂದು ಅಂಗವಾಗಿದ್ದು, ಈ ಕ್ಷೇತ್ರದಿಂದಲೇ ಅನೇಕ ಗಣ್ಯರು ಹೊರಹೊಮ್ಮಿರುವುದು ಹೆಮ್ಮೆಯ ಸಂಗತಿ ಎಂದರು.

ಉತ್ತರ ಕರ್ನಾಟಕದ ಪರಂಪರೆಯ ಆಹಾರ ಪದ್ಧತಿಗೆ ಕಡಿಮೆ ಪ್ರಾಮುಖ್ಯತೆ ನೀಡಲಾಗುತ್ತಿರುವುದನ್ನು ಉಲ್ಲೇಖಿಸಿದ ಅವರು, ರೊಟ್ಟಿ, ಮಿರ್ಚಿ, ಬೆಟಗೇರಿ ಚಟ್ನಿಯಂತಹ ಸ್ಥಳೀಯ ಆಹಾರಗಳನ್ನು ಉತ್ತೇಜಿಸಿ ಸಂಸ್ಕೃತಿಯನ್ನು ಉಳಿಸಬೇಕು ಎಂದು ಸಚಿವ ಹೆಚ್. ಕೆ ಪಾಟೀಲ ಕರೆ ನೀಡಿದರು. ಬೆಂಗಳೂರು ನಗರದಲ್ಲಿಯೂ ರೊಟ್ಟಿ ಸೇವೆಯನ್ನು ಪರಿಚಯಿಸಿದ ಅನುಭವವನ್ನು ಹಂಚಿಕೊಂಡ ಅವರು, ಸ್ಥಳೀಯ ಆಹಾರ ಪದ್ಧತಿಯನ್ನು ಉಳಿಸುವ ಮೂಲಕ ಗದಗ ಜಿಲ್ಲೆಗೆ ಹೆಮ್ಮೆ ತರಬಹುದು ಎಂದು ಹೇಳಿದರು.

> "ಪ್ರವಾಸೋದ್ಯಮ ಇಲಾಖೆ ಅಭಿವೃದ್ಧಿಯಿಂದ ಜಿಲ್ಲೆಯ ಹೋಟೆಲ್ ಕ್ಷೇತ್ರವೂ ಬೆಳವಣಿಗೆ ಕಂಡಿದೆ. ಉದಯರಾಗ ಮತ್ತು ಸಂಧ್ಯಾರಾಗ ಕಾರ್ಯಕ್ರಮಗಳಿಗೆ ಉಪಹಾರದ ವ್ಯವಸ್ಥೆ ಮಾಡಲು ನಾವು ಸಿದ್ಧರಾಗಿದ್ದೇವೆ."
>
> – **ಜಿ.ಕೆ. ಶೆಟ್ಟಿ, ಅಧ್ಯಕ್ಷರು,** ರಾಜ್ಯ ಹೋಟೆಲ್ ಒಡೆಯರ ಸಂಘ

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಹೋಟೆಲ್ ಒಡೆಯರ ಸಂಘದ ಅಧ್ಯಕ್ಷ ಎಚ್. ವಿಶ್ವನಾಥ ಶೆಟ್ಟಿ, ಬಿ.ಬಿ. ಅಸೂಟಿ, ಕೆ. ಸುಧಾಕರ ರಾವ್, ಬಿ. ರಾಜೀವ ಶೆಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜೀವನ ಉತ್ಸಾಹವೇ ನಿಜವಾದ ಧರ್ಮ

## ಕನ್ನೊಳ್ಳಿ ಹಿರೇಮಠದಲ್ಲಿ ಪುರಾಣ ಪ್ರವಚನ ಧರ್ಮ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು



**■ವಿಜಯಸಾಕ್ಷಿ ಸುದ್ದಿ, ಸಿಂದಗಿ**

ಜೀವನದಲ್ಲಿ ಸುಖ-ದುಃಖ, ನೋವು-ನಲಿವು ಎಲ್ಲರ ಬದುಕಿನ ಅವಿಭಾಜ್ಯ ಅಂಗವಾಗಿದ್ದು, ಅವುಗಳನ್ನು ಸಮಚಿತ್ತದಿಂದ ಸ್ವೀಕರಿಸಿ ಉತ್ಸಾಹದಿಂದ ಬದುಕುವುದೇ ನಿಜವಾದ ಧರ್ಮ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ಕನ್ನೊಳ್ಳಿ ಹಿರೇಮಠದಲ್ಲಿ ಗುರುವಾರ ನಡೆದ ಪುರಾಣ ಪ್ರವಚನ ಉದ್ಘಾಟನಾ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಮನುಷ್ಯ ಬದುಕಿಗೆ ನೀರು, ಅನ್ನ, ಗಾಳಿ ಅಗತ್ಯವಿರುವಂತೆ ಆದರ್ಶ ಜೀವನಕ್ಕೆ ಮಹಾತ್ಮರ ಸಂದೇಶಗಳು ದಾರಿ ದೀಪವಾಗುತ್ತವೆ ಎಂದರು.

ವೀರಶೈವ ಧರ್ಮವು ಸಕಲರ ಒಳಿತಿಗಾಗಿ ಕಾರ್ಯನಿರ್ವಹಿಸುತ್ತಿದ್ದು, ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಶಿವಾದ್ವೈತ ಸಿದ್ಧಾಂತವು ಮಾನವ ಜೀವನವನ್ನು ಉನ್ನತಿಗೇರಿಸುವ ಮಾರ್ಗವನ್ನು ತೋರಿಸಿದೆ ಎಂದು ಹೇಳಿದರು. ಅಸ್ಪೃಶ್ಯರ ಉದ್ಧಾರ ಹಾಗೂ ಮಹಿಳೆಯರಿಗೆ ಸಮಾನ ಧಾರ್ಮಿಕ ಅವಕಾಶಗಳನ್ನು ನೀಡಿದ ಶ್ರೇಯಸ್ಸು ಗುರುಪರಂಪರೆಗೆ ಸೇರಿದೆ ಎಂದು ತಿಳಿಸಿದರು.

ವೀರಶೈವ ಧರ್ಮಾಚಾರ್ಯರ ಬೋಧನೆಗಳು ಸಮಾಜದ ವಿಕಾಸಕ್ಕೆ ತಳಹದಿಯಾಗಿದ್ದು, ಹಲವು ಮಹನೀಯರು ತಮ್ಮ ಗುರುಗಳ ಮಾರ್ಗದರ್ಶನದಲ್ಲಿ ಜೀವನದಲ್ಲಿ ಉನ್ನತ ಸಾಧನೆ ಮಾಡಿದ್ದಾರೆ ಎಂಬುದನ್ನು ಉದಾಹರಣೆಗಳೊಂದಿಗೆ ವಿವರಿಸಿದರು.

ಕನ್ನೊಳ್ಳಿ ಹಿರೇಮಠದ ಲಿಂಗೈಕ್ಯ ಶ್ರೀ ಮರುಳಾರಾಧ್ಯ ಶಿವಾಚಾರ್ಯರ ಸೇವೆಯನ್ನು ಸ್ಮರಿಸಿದ ಅವರು, ಇಂದಿನ ಪಟ್ಟಾಧ್ಯಕ್ಷರಾದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಅವರ ಆದರ್ಶ ದಾರಿಯಲ್ಲಿ ನಡೆದು ಧರ್ಮ ಸಂಸ್ಕೃತಿಯನ್ನು ಬೆಳೆಸುತ್ತಿರುವುದು ಸಂತೋಷದ ಸಂಗತಿ ಎಂದು ಹೇಳಿದರು.

ಸಮಾರಂಭದಲ್ಲಿ ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು ಹಾಗೂ ಯಂಕಂಚಿ ಹಿರೇಮಠದ ಅಭಿನವ ರುದ್ರಮುನಿ ಶಿವಾಚಾರ್ಯರು ನುಡಿನಮನ ಸಲ್ಲಿಸಿದರು. ಅಧ್ಯಕ್ಷತೆಯನ್ನು ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆ ಅಧ್ಯಕ್ಷರಾದ ಸಾರಂಗಮಠದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯ ಸ್ವಾಮಿಗಳು ವಹಿಸಿ ಧರ್ಮ ಸಂಸ್ಕೃತಿಯ ಕುರಿತು ಮಾತನಾಡಿದರು.

ಕಾರ್ಯಕ್ರಮದ ನೇತೃತ್ವ ವಹಿಸಿದ ಕನ್ನೊಳ್ಳಿ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು, ಭಕ್ತರ ಬಹುಕಾಲದ ಸಂಕಲ್ಪ ಇಂದು ನೆರವೇರಿದ ಸುದಿನವಾಗಿದ್ದು, ಜೀವನ ಉನ್ನತಿಗೆ ಧರ್ಮಾಚರಣೆ ಅಗತ್ಯವೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೆರುಟಗಿ ಶಿವಬಸವ ಶಿವಾಚಾರ್ಯರು, ಸಿಂದಗಿ ಸಾರಂಗಮಠದ ಡಾ. ವಿಶ್ವಪ್ರಭುದೇವ ಶಿವಾಚಾರ್ಯರು, ಮಾಗಣಗೇರಾ ಏಕಾಕ್ಷರ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ರಮೇಶ್ ಭೂಸನೂರ, ರಾಮನಗೌಡ ಕನ್ನೊಳ್ಳಿ, ಮಹೇಶ ಪೋತದಾರ, ಅಶೋಕ ವಾರದ, ವಿ.ಡಿ. ವಸ್ತ್ರದ ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಮರುಳಾರಾಧ್ಯ ಶಿವಾಚಾರ್ಯರ "ಚರಿತಾಮೃತ (ಭಾಮಿನಿ ಷಟ್ಪದಿ)" ಗ್ರಂಥವನ್ನು ಲೋಕಾರ್ಪಣೆ ಮಾಡಲಾಯಿತು. ಪೂಜಾ ಹಿರೇಮಠ ನಿರೂಪಣೆ ಮಾಡಿದರು. ಸಮಾರಂಭದ ನಂತರ ಅನ್ನದಾಸೋಹ ಜರುಗಿತು.

# ಪಿಯುಸಿ ಫಲಿತಾಂಶದಲ್ಲಿ ಶಿವರಾಜ ಗುರಿಕಾರ ಸಾಧನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶ ಗುರುವಾರ ಪ್ರಕಟವಾಗಿದ್ದು, ಗದಗ ನಗರದ ಜೆ.ಟಿ. ಕಾಲೇಜಿನ ವಿದ್ಯಾರ್ಥಿ ಕುಮಾರ ಶಿವರಾಜ ಶಂಕರಪ್ಪ ಗುರಿಕಾರ ಅವರು ವಿಜ್ಞಾನ ವಿಭಾಗದಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ.

600 ಅಂಕಗಳಿಗೆ 549 ಅಂಕಗಳನ್ನು ಪಡೆದು 91.50% ಅಂಕಗಳೊಂದಿಗೆ ಅವರು ಅಗ್ರ ಸ್ಥಾನದಲ್ಲಿ ತೇರ್ಗಡೆಯಾಗಿದ್ದಾರೆ.

ಪತ್ರಿಕಾ ಛಾಯಾಗ್ರಾಹಕ ಶಂಕರ ಗುರಿಕಾರ ಅವರ ಪುತ್ರರಾಗಿರುವ ಶಿವರಾಜ ಅವರ ಈ ಸಾಧನೆಗೆ ಪತ್ರಕರ್ತರು ಅಭಿನಂದನೆ ಸಲ್ಲಿಸಿದ್ದಾರೆ.

# ಪಿಯುಸಿ ಫಲಿತಾಂಶದಲ್ಲಿ ಆರ್ಯಭಟ ಕಾಲೇಜಿನ ಗಮನಾರ್ಹ ಸಾಧನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಐ.ಪಿ.ಇ.ಟಿ ಹಾಗೂ ಶಾರದಾ ಅಕಾಡೆಮಿ ನೇತೃತ್ವದ ಆರ್ಯಭಟ ವಿಜ್ಞಾನ ಹಾಗೂ ವಾಣಿಜ್ಯ ಪದವಿ ಪೂರ್ವ ಕಾಲೇಜು ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಗಮನಾರ್ಹ ಸಾಧನೆ ಮಾಡಿದೆ.

**ವಿಜ್ಞಾನ ವಿಭಾಗ:** ಶೇ. 93.5ರ ತೇರ್ಗಡೆಯೊಂದಿಗೆ ಕು. ಅರ್ಪಿತಾ ಲಮಾಣಿ 579 ಅಂಕ (96.5%) ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ನವನೀತಾ ಪಾಟೀಲ 558 ಅಂಕ (93%) ಪಡೆದು ದ್ವಿತೀಯ ಸ್ಥಾನ ಹಾಗೂ ಅಂಜಲಿ ಹಡಪದ 551 ಅಂಕ (91.8%) ಪಡೆದು ತೃತೀಯ ಸ್ಥಾನ ಗಳಿಸಿದ್ದಾರೆ.

**ವಾಣಿಜ್ಯ ವಿಭಾಗ:** ಶೇ. 97ರ ತೇರ್ಗಡೆಯೊಂದಿಗೆ ಭೀಮಪ್ಪ 558 ಅಂಕ (93%) ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ಇಫತ್ ಮತ್ತು ಪ್ರಮೋದ ತಲಾ 556 ಅಂಕ (92.5%) ಪಡೆದು ದ್ವಿತೀಯ ಸ್ಥಾನವನ್ನು ಹಂಚಿಕೊಂಡಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಕಾಲೇಜಿನ ಚೇರ್ಮನ್ ಶರಣು ರಡ್ಡೇರ, ಪ್ರಾಚಾರ್ಯ ಪ್ರಶಾಂತಕುಮಾರ ದೊಡ್ಡಮನಿ, ಆಡಳಿತಾಧಿಕಾರಿ ಸಂಗಮೇಶ ಕರ್ಕಿಕಟ್ಟಿ ಹಾಗೂ ಉಪನ್ಯಾಸಕರು ಅಭಿನಂದನೆ ಸಲ್ಲಿಸಿದ್ದಾರೆ.

# ಎಸ್‌ಜೆಜೆಎಂ ಪಿಯು ಕಾಲೇಜಿನಲ್ಲಿ ಉತ್ತಮ ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದ 2025-26ನೇ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಸಂಜನಾ ಜೋಗಿ 574 ಅಂಕಗಳನ್ನು ಪಡೆದು 95.66%ದೊಂದಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಕೀರ್ತಿ ಕುಂಬಿಮಠ 558 ಅಂಕಗಳನ್ನು ಪಡೆದು 93%ದೊಂದಿಗೆ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಸೌಜನ್ಯ ಹೊಂಬಳ 547 ಅಂಕಗಳನ್ನು ಪಡೆದು 91.16%ದೊಂದಿಗೆ ತೃತೀಯ ಸ್ಥಾನ ಪಡೆದು ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಮಹಾವಿದ್ಯಾಲಯದ ಆಡಳಿತ ಮಂಡಳಿ ಹಾಗೂ ಉಪನ್ಯಾಸಕರು ಅಭಿನಂದನೆ ಸಲ್ಲಿಸಿದ್ದಾರೆ.

# ಆರೋಗ್ಯಕರ ದೇಹ, ಮನಸ್ಸಿನಿಂದ ಮಾತ್ರ ನಿಜವಾದ ಸಂತೋಷ ಪ್ರಾಪ್ತಿ

## ಅಡವಿಂದ್ರಸ್ವಾಮಿ ಮಠದ ಶಿವಾನುಭವದಲ್ಲಿ ವಿಶ್ವ ಆರೋಗ್ಯ ದಿನಾಚರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಆರೋಗ್ಯವೇ ಜೀವನದ ಮೂಲಾಧಾರವಾಗಿದ್ದು, ಸಂಪತ್ತು, ಯಶಸ್ಸು, ಹಣ ಇದ್ದರೂ ಉತ್ತಮ ಆರೋಗ್ಯ ಇಲ್ಲದಿದ್ದರೆ ಜೀವನವೇ ಅರ್ಥಹೀನವಾಗುತ್ತದೆ ಎಂದು ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮೆಡಿಸಿನ್ ವಿಭಾಗದ ಪ್ರಾಧ್ಯಾಪಕ ಡಾ. ಪ್ರಕಾಶ ಹೊಸಮನಿ ಅಭಿಪ್ರಾಯಪಟ್ಟರು.

ಮುಳುಗುಂದ ನಾಕಾ ಸಮೀಪದ ಅನ್ನಪೂರ್ಣೇಶ್ವರಿ ಮಂದಿರದಲ್ಲಿ ನಡೆದ ಶ್ರೀ ಅಡವಿಂದ್ರಸ್ವಾಮಿ ಮಠದ 346ನೇ ಮಾಸಿಕ ಶಿವಾನುಭವ ಕಾರ್ಯಕ್ರಮದಲ್ಲಿ ವಿಶ್ವ ಆರೋಗ್ಯ ದಿನಾಚರಣೆಯ ಅಂಗವಾಗಿ "ನಮ್ಮ ಆರೋಗ್ಯ ನಮ್ಮ ಕೈಯಲ್ಲಿ" ವಿಷಯದ ಮೇಲೆ ಅವರು ಉಪನ್ಯಾಸ ನೀಡಿದರು.

ಆರೋಗ್ಯಕರ ದೇಹ ಮತ್ತು ಮನಸ್ಸಿನಿಂದ ಮಾತ್ರ ನಿಜವಾದ ಸಂತೋಷ ದೊರೆಯುತ್ತದೆ ಎಂದು ಹೇಳಿದ ಅವರು, ಪೌಷ್ಟಿಕ ಆಹಾರ, ನಿಯಮಿತ ವ್ಯಾಯಾಮ, ಸಮರ್ಪಕ ನಿದ್ರೆ ಹಾಗೂ ಒತ್ತಡರಹಿತ ಜೀವನದ ಅಗತ್ಯತೆಯನ್ನು ವಿವರಿಸಿದರು.

ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳ ಮೂಲಕ ಉಚಿತ ತಪಾಸಣೆ ಹಾಗೂ ಚಿಕಿತ್ಸೆ ಲಭ್ಯವಿದ್ದು, ಜನರು ಅದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರೆ ನೀಡಿದ ಅವರು, ಭಾರತದಲ್ಲಿ ಮಧುಮೇಹ ಹಾಗೂ ಕ್ಯಾನ್ಸರ್ ಪ್ರಕರಣಗಳು ಹೆಚ್ಚುತ್ತಿರುವುದು ಕಳವಳಕಾರಿ ಎಂದು ಹೇಳಿದರು. ನಿಯಮಿತ ಆರೋಗ್ಯ ತಪಾಸಣೆ ಮತ್ತು ಸೂಕ್ತ ವೈದ್ಯಕೀಯ ಸಲಹೆಯಿಂದ ಆರೋಗ್ಯಕರ ಜೀವನ ನಡೆಸಬೇಕು ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಿವಾನುಭವ ಸಮಿತಿಯ ಅಧ್ಯಕ್ಷ ಹಾಗೂ ಸಾಹಿತಿ ಡಾ. ರಾಜೇಂದ್ರ ಎಸ್. ಗಡಾದ ಅವರು ಉತ್ತಮ ಆರೋಗ್ಯಕ್ಕಾಗಿ ವಿಜ್ಞಾನಾಧಾರಿತ ಜೀವನಶೈಲಿಯ ಅಗತ್ಯವನ್ನು ಒತ್ತಿಹೇಳಿದರು. ಅಡವಿಂದ್ರಸ್ವಾಮಿ ಮಠದ ಧರ್ಮದರ್ಶಿ ವೇದಮೂರ್ತಿ ಮಹೇಶ್ವರ ಸ್ವಾಮಿಗಳು ಆರೋಗ್ಯವೇ ಭಾಗ್ಯವಾಗಿದ್ದು, ಉತ್ತಮ ಹವ್ಯಾಸ, ಪರಿಸರ ಸ್ವಚ್ಛತೆ ಹಾಗೂ ದೈನಂದಿನ ಶಿಸ್ತಿನ ಮೂಲಕ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಷ್ಟ್ರಮಟ್ಟದ ವಿಕಸಿತ ಭಾರತ ಯುವ ಸಂಸತ್ ಮಹೋತ್ಸವದಲ್ಲಿ ಪ್ರಥಮ ಸ್ಥಾನ ಪಡೆದ ಟಿ.ಸಿ.ಇ ಕಾಲೇಜಿನ ವಿದ್ಯಾರ್ಥಿನಿ ಬಿ. ಮಾನ್ಯ ಶೆಟ್ಟಿ ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು. ಸಮಾರಂಭದಲ್ಲಿ ಶ್ರೀಮಠದ ಹಿರಿಯರಾದ ಶ್ರೀಸಜ್ಜನ ನಿವೃತ್ತ ಎಂಜಿನಿಯರ್, ಜಿ.ಎಂ. ಯಾನಮಶೆಟ್ಟಿ, ಯೋಗ ಸಾಧಕರಾದ ಚನ್ನಬಸಪ್ಪ, ಹೋಟೆಲ್ ಉದ್ಯಮಿದಾರರಾದ ವಿಜಯಕುಮಾರ್ ಶೆಟ್ಟಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಟಿ.ಬಿ. ಮಾನ್ವಿ ಪಿಯು ಕಾಲೇಜಿನಲ್ಲಿ 97% ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**


ಪಟ್ಟಣದ ಟಿ.ಬಿ. ಮಾನ್ವಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಒಟ್ಟು ಶೇ. 97ರಷ್ಟು ಫಲಿತಾಂಶ ಸಾಧಿಸಿ ಗಮನಾರ್ಹ ಸಾಧನೆ ಮಾಡಿದೆ. ಒಟ್ಟು 156 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಇವರಲ್ಲಿ 32 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ಹಾಗೂ 97 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ ಶೇ. 100ರಷ್ಟು ಫಲಿತಾಂಶ ದಾಖಲಾಗಿದ್ದು, ಕಲಾ ಮತ್ತು ವಿಜ್ಞಾನ ವಿಭಾಗಗಳಲ್ಲಿ ಶೇ. 96ರಷ್ಟು ಫಲಿತಾಂಶದೊಂದಿಗೆ ಜಿಲ್ಲೆಯಲ್ಲಿ ಗಮನಸೆಳೆದಿದೆ.

**ಕಲಾ ವಿಭಾಗ:** ನಂದಿತಾ ವಾಲ್ಮೀಕಿ - 95.50%, ಸಹನಾಬೇಗಂ ಸುಂಕದ - 95%, ಭಾವನಾ ಮೆಣಸಿನಕಾಯಿ - 94%.

**ವಾಣಿಜ್ಯ ವಿಭಾಗ:** ಪ್ರೀತಮ್ ನಾಯ್ಕ - 92.50%, ಪವಿತ್ರಾ ಕಮ್ಮಾರ - 92%, ಪೂರ್ಣಿಮಾ ಕೋಣಿ - 92%, ಶಿರಿನಾ ನದಾಫ - 92%.

**ವಿಜ್ಞಾನ ವಿಭಾಗ:** ರೇಷ್ಮಾ ಬಾಕಳೆ - 92%, ಶಿವಯೋಗಿ ಹಡಪದ - 92%, ರವಿ ತಳವಾರ - 91% ಈ ಕುರಿತು ಪ್ರಾಚಾರ್ಯ ಮಂಜುನಾಥ ಕೊಕ್ಕರಗೊಂದಿ ಮಾಹಿತಿ ನೀಡಿ, ವಿದ್ಯಾರ್ಥಿಗಳ ಸಾಧನೆಗೆ ಕಾಲೇಜು ಅಭಿವೃದ್ಧಿ ಸಮಿತಿ, ಪ್ರಾಚಾರ್ಯರು ಹಾಗೂ ಉಪನ್ಯಾಸಕ ವರ್ಗ ಸಂತೋಷ ವ್ಯಕ್ತಪಡಿಸಿದ್ದಾರೆ.

# ಶಿಗ್ಲಿ ಪಿಯು ಕಾಲೇಜಿನಲ್ಲಿ 92% ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶಿಗ್ಲಿ ಗ್ರಾಮದ ಪರಮೇಶ್ವರಪ್ಪ ಎಂ. ಬಳಿಗಾರ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಒಟ್ಟು ಶೇ. 92ರಷ್ಟು ಫಲಿತಾಂಶ ಸಾಧಿಸಿ ಗಮನಾರ್ಹ ಸಾಧನೆ ಮಾಡಿದೆ.

**ಕಲಾ ವಿಭಾಗ:** ದೀಪಾ ಪಾಟೀಲ - 96%, ನಾಗರತ್ನ ಕೊಪ್ಪದ - 96%, ಮಾಲತಿ ದೊಡ್ಡಮನಿ - 95%.

**ವಾಣಿಜ್ಯ ವಿಭಾಗ:** ಅಶ್ವಿನಿ ಪೂಜಾರ - 92%, ಗೌರಮ್ಮ ಅಂಗಡಿ - 92%, ಸಹನಾ ಮಲ್ಲಿಗವಾಡ - 88%.

**ವಿಜ್ಞಾನ ವಿಭಾಗ :** ನಂದೀಶ ಅಂಗಡಿ - 85%, ಸಮರ್ಥ ದೇವಾಂಗಮಠ - 82%, ಅಕ್ಷತಾ ತಿರಕಣ್ಣವರ - 82%.

ಮೂರು ವಿಭಾಗಗಳಲ್ಲೂ ವಿದ್ಯಾರ್ಥಿಗಳು ಉತ್ತಮ ಸಾಧನೆ ತೋರಿದ್ದು, ಕಾಲೇಜಿನ ಪ್ರಗತಿಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಕಾಲೇಜು ಅಭಿವೃದ್ಧಿ ಸಮಿತಿ, ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ಪಾಲಕರು ಹರ್ಷ ವ್ಯಕ್ತಪಡಿಸಿದ್ದಾರೆ.

## ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಕಲಾ-ವಾಣಿಜ್ಯ ವಿಭಾಗಗಳಲ್ಲಿ ಸಾಧನೆ

# ಲಕ್ಷ್ಮೇಶ್ವರ ಮಹಿಳಾ ಕಾಲೇಜಿಗೆ ಕೀರ್ತಿ ತಂದ ವಿದ್ಯಾರ್ಥಿನಿಯರು













**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಹಿಳೆಯರಿಂದಲೇ ನಡೆಸಲ್ಪಡುವ ಈ ಭಾಗದ ಪ್ರಮುಖ ಶಿಕ್ಷಣ ಸಂಸ್ಥೆಯಾಗಿರುವ ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಎಸ್.ಎಂ.ಜೆ.ವಿ.ಜಿ ಕಲಾ ಮತ್ತು ವಾಣಿಜ್ಯ ಮಹಿಳಾ ಪಿಯು ಕಾಲೇಜು ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಉತ್ತಮ ಸಾಧನೆ ಮಾಡಿದ್ದು, ಸಂಸ್ಥೆಗೆ ಕೀರ್ತಿ ತಂದಿದೆ.

ಕಲಾ ವಿಭಾಗದಲ್ಲಿ ರೋಹಿಣಿ ಪಿ. ಬೆಟಗೇರಿ ಶೇ. 97.33 ಅಂಕಗಳನ್ನು ಪಡೆದು ಜಿಲ್ಲೆಗೆ ದ್ವಿತೀಯ ಹಾಗೂ ತಾಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ನಂದಿತಾ ಐ. ಬಳಿಗಾರ ಶೇ. 96.66 ಅಂಕಗಳೊಂದಿಗೆ ಜಿಲ್ಲೆಗೆ ತೃತೀಯ ಸ್ಥಾನ ಪಡೆದಿದ್ದಾಳೆ. ಗೀತಾ ಎಂ. ಹಿರೇಮಠ ಶೇ. 95 ಅಂಕಗಳನ್ನು ಗಳಿಸಿ ಉತ್ತಮ ಸಾಧನೆ ತೋರಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಸಹನಾ ಬಿ. ಶೀಶನಳ್ಳಿ ಶೇ. 92.50, ನಂದಿತಾ ಎಸ್. ನಾಗಲೋಟಿ ಶೇ. 91.83 ಹಾಗೂ ಜ್ಯೋತಿ ಎಂ. ಬಕ್ಸದ್ ಶೇ. 89.50 ಅಂಕಗಳನ್ನು ಗಳಿಸಿ ಗಮನಾರ್ಹ ಸಾಧನೆ ಮಾಡಿದ್ದಾರೆ.

ಇದಲ್ಲದೆ ರೋಹಿಣಿ ಬೆಟಗೇರಿ ಕನ್ನಡ, ಇತಿಹಾಸ ಮತ್ತು ಭೂಗೋಳಶಾಸ್ತ್ರ ವಿಷಯಗಳಲ್ಲಿ ನೂರಕ್ಕೆ ನೂರು ಅಂಕಗಳನ್ನು ಗಳಿಸಿರುವುದು ವಿಶೇಷವಾಗಿದೆ. ನಂದಿತಾ ಬಳಿಗಾರ ಕೂಡ ಕನ್ನಡ ವಿಷಯದಲ್ಲಿ ನೂರಕ್ಕೆ ನೂರು ಅಂಕಗಳನ್ನು ಪಡೆದು ವಿಶಿಷ್ಟ ಸಾಧನೆ ಮಾಡಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ತಾಯಿ ಪಾರ್ವತಿ ಮಕ್ಕಳ ಬಳಗದ ಅಧ್ಯಕ್ಷೆ ಸುವರ್ಣಬಾಯಿ ಬಹದ್ದೂರದೇಸಾಯಿ, ಉಪಾಧ್ಯಕ್ಷೆ ಜಯಲಕ್ಷ್ಮಿ ಮಹಾಂತಶೆಟ್ಟರ, ಕಾರ್ಯದರ್ಶಿ ಜಯಲಕ್ಷ್ಮಿ ಗಡ್ಡದೇವರಮಠ, ಪ್ರಾಚಾರ್ಯ ಸರಸ್ವತಿ ಹುಲ್ಲಣ್ಣವರ ಹಾಗೂ ಉಪನ್ಯಾಸಕರು ಮತ್ತು ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ.

# ಶ್ರೀ ಜಗದ್ಗುರು ಶಿವಾನಂದ ಪಿಯು ವಿಜ್ಞಾನ ಕಾಲೇಜಿನಲ್ಲಿ ಅತ್ಯುತ್ತಮ ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಜಗದ್ಗುರು ಶಿವಾನಂದ ಪದವಿ ಪೂರ್ವ ವಿಜ್ಞಾನ ಕಾಲೇಜಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಕು. ಕೀರ್ತನಾ ಭಾಸ್ಕರ 93% ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಕು. ಅನನ್ಯಾ ಲಮಾಣಿ 88% ಅಂಕಗಳೊಂದಿಗೆ ದ್ವಿತೀಯ ಸ್ಥಾನ ಹಾಗೂ ಕು. ಕಾರ್ತಿಕ ಅಂಗಡಿ 86% ಅಂಕಗಳೊಂದಿಗೆ ತೃತೀಯ ಸ್ಥಾನ ಗಳಿಸಿದ್ದಾರೆ.

ಒಟ್ಟು 3 ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ಪ್ರಥಮ ಶ್ರೇಣಿಯಲ್ಲಿ, 31 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಹಾಗೂ 5 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಪರಮಪೂಜ್ಯ ಶ್ರೀಗಳು, ವಿದ್ಯಾಸಂಸ್ಥೆಯ ಪದಾಧಿಕಾರಿಗಳು ಹಾಗೂ ಕಾಲೇಜಿನ ಪ್ರಾಚಾರ್ಯರಾದ ಎಸ್.ವಿ. ವರ್ಣೇಕರ ಸೇರಿದಂತೆ ಎಲ್ಲಾ ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಎ.23ರಂದು ಭಗೀರಥ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಭಗೀರಥ ಜಯಂತಿ ಆಚರಣೆ ಸಂಬಂಧ ಪೂರ್ವಸಿದ್ಧತಾ ಸಭೆಯು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೆಯಲ್ಲಿ ಚರ್ಚಿಸಿ, ಜಿಲ್ಲಾಡಳಿತದಿಂದ ಎಪ್ರಿಲ್ 23ರಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶ್ರೀ ಭಗೀರಥ ಜಯಂತಿಯನ್ನು ಸಾಂಕೇತಿಕವಾಗಿ ಆಚರಿಸಲು ತೀರ್ಮಾನಿಸಲಾಯಿತು. ಸಮಾಜದವರು ತಮ್ಮ ಅನುಕೂಲಕ್ಕೆ ತಕ್ಕಂತೆ ದಿನಾಂಕ ನಿಗದಿಪಡಿಸಿದ ನಂತರ, ಸಮಾಜದ ವತಿಯಿಂದವೂ ಪ್ರತ್ಯೇಕವಾಗಿ ಜಯಂತಿ ಕಾರ್ಯಕ್ರಮವನ್ನು ಆಯೋಜಿಸಲಾಗುವುದು ಎಂದು ತಿಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಎನ್. ತುಂಬರಮಟ್ಟಿ, ಅನಿಲ ಗರಗ, ಭೀಮನಗೌಡ ಪಾಟೀಲ, ರಾಜಶೇಖರ, ಶಿವಪುತ್ರಪ್ಪ ಕುಂದ್ರಳ್ಳಿ, ರಾಮಣ್ಣ ಉಪ್ಪಾರ, ಭೀಮಪ್ಪ ಉಪ್ಪಾರ, ದೇವಪ್ಪ ಉಪ್ಪಾರ, ಚನ್ನಪ್ಪ ಹಸರಂಬಿ, ರಾಜು ಗಡ್ಡಿ ಸೇರಿದಂತೆ ಸಮಾಜದ ಮುಖಂಡರು, ಗಣ್ಯರು ಹಾಗೂ ಹಿರಿಯರು ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಳ್ಳಾರಿ ಅವರು ಸ್ವಾಗತಿಸಿ ವಂದಿಸಿದರು.

# ಬಾಲ್ಯದಲ್ಲೇ ಮೌಲ್ಯಾಧಾರಿತ ಶಿಕ್ಷಣ ಅಗತ್ಯ

## ದುರ್ಗಾದೇವಿ ಶಿಕ್ಷಣ ಸಂಸ್ಥೆಗೆ ಪ್ರಶಾಂತಿ ಬಾಲಮಂದಿರ ಟ್ರಸ್ಟಿಗಳ ಭೇಟಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಂಗಾಪುರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಗೆ ಚಿಕ್ಕಬಳ್ಳಾಪೂರ ಜಿಲ್ಲೆಯ ಮುದ್ದೇನಹಳ್ಳಿ ಪ್ರಶಾಂತಿ ಬಾಲಮಂದಿರದ ಟ್ರಸ್ಟಿಗಳು ಭೇಟಿ ನೀಡಿ, ಸಂಸ್ಥೆಯ ಕಾರ್ಯಚಟುವಟಿಕೆಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಟ್ರಸ್ಟಿ ಎಂ.ಎಸ್. ಸತ್ಯನಾರಾಯಣ ಅವರು, ಭಾರತ ಸಂಸ್ಕೃತಿ ಉಳಿಯಬೇಕಾದರೆ ಬಡತನ ಮತ್ತು ರೋಗಗಳನ್ನು ನಿವಾರಿಸುವುದು ಅಗತ್ಯವಾಗಿದ್ದು, ಅದಕ್ಕೆ ಮೌಲ್ಯಯುತ ಶಿಕ್ಷಣವೇ ಮೂಲಾಧಾರ ಎಂದು ಹೇಳಿದರು.

ಮಕ್ಕಳಿಗೆ ಬಾಲ್ಯದಲ್ಲೇ ಮೌಲ್ಯಾಧಾರಿತ ಶಿಕ್ಷಣ ನೀಡಿದರೆ, ಅವರು ಬೆಳೆದಂತೆ ಅದರ ಮಹತ್ವವನ್ನು ಅರಿತು ಸಮಾಜ ಸೇವೆಯ ದಾರಿಯಲ್ಲಿ ಮುಂದುವರಿಯುತ್ತಾರೆ. ಇಂತಹ ಉತ್ತಮ ವ್ಯಕ್ತಿತ್ವಗಳು ಈ ಶಾಲೆಯಿಂದ ಹೊರಹೊಮ್ಮಲಿ ಎಂದು ಆಶಿಸಿದರು. ಶಿಕ್ಷಕರ ಸೇವೆ ಈ ದಿಕ್ಕಿನಲ್ಲಿ ಮಹತ್ವದ್ದಾಗಿದೆ ಎಂದು ಅವರು ತಿಳಿಸಿದರು.

ಪುಟ್ಟಪರ್ತಿಯ ಸತ್ಯಸಾಯಿ ಭಗವಾನ್ ಬಾಬಾ ಅವರ ನಂತರ ಸದ್ಗುರು ಡಾ. ಮಧುಸೂದನ್ ಸಾಯಿ ಅವರ ನೇತೃತ್ವದಲ್ಲಿ "ಒಂದು ಜಗತ್ತು – ಒಂದು ಕುಟುಂಬ" ಎಂಬ ಉದ್ದೇಶದೊಂದಿಗೆ ಮುದ್ದೇನಹಳ್ಳಿ ಸೇರಿದಂತೆ ದೇಶ–ವಿದೇಶಗಳಲ್ಲಿ ಉಚಿತ ಪೌಷ್ಠಿಕತೆ, ಶಿಕ್ಷಣ ಹಾಗೂ ಆರೋಗ್ಯ ಸೇವೆಗಳು ನಡೆಯುತ್ತಿವೆ ಎಂದು ವಿವರಿಸಿದರು.

ರಾಜ್ಯದ ಸರ್ಕಾರಿ ಶಾಲೆಗಳ ಲಕ್ಷಾಂತರ ಮಕ್ಕಳಿಗೆ ಪೌಷ್ಠಿಕಾಹಾರ ಕಾರ್ಯಕ್ರಮದಡಿ ಹಾಲಿನೊಂದಿಗೆ ಪೌಡರ್ ವಿತರಣೆ, ಸಾವಿರಾರು ವಿದ್ಯಾರ್ಥಿಗಳಿಗೆ ಉಚಿತ ವಸತಿಯೊಂದಿಗೆ ಶಿಕ್ಷಣ ಹಾಗೂ ಲಕ್ಷಾಂತರ ರೋಗಿಗಳಿಗೆ ಉಚಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಈ ಸೇವೆಗಳಲ್ಲಿ ಎಲ್ಲಿಯೂ ಶುಲ್ಕ ವಸೂಲಾತಿ ವ್ಯವಸ್ಥೆ ಇಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿರಹಟ್ಟಿ ತಾಲೂಕಿನ ಮಜ್ಜೂರಿನ ಶ್ರೀ ಸತ್ಯಸಾಯಿ ವಾಣಿ ನಿಕೇತನ ಗುರುಕುಲದ ಚೇರ್ಮನ್ ಬಿ.ಎಸ್. ಗೋಣಿ, ಕಾರ್ಯಾಧ್ಯಕ್ಷೆ ಡಾ. ಸೀಮಾ, ಹಾಲುಮತ ಮಹಾಸಭಾ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ಪ್ರೊ. ರಾಮಚಂದ್ರ ಜೋಗಿನ, ದುರ್ಗಾದೇವಿ ಶಿಕ್ಷಣ ಸಮಿತಿಯ ಅಧ್ಯಕ್ಷ ವೆಂಕಟೇಶ ಇಮರಾಪೂರ, ಉಪಾಧ್ಯಕ್ಷೆ ಮಲ್ಲಮ್ಮ ಕೊಪ್ಪದ, ಕಾರ್ಯದರ್ಶಿ ಕವಿತಾ ಇಮರಾಪೂರ, ನಿರ್ದೇಶಕರು ಮೋಹನ ಇಮರಾಪೂರ, ಮುತ್ತು ಜಡಿ ಸೇರಿದಂತೆ ಶಿಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಕಠಿಣ ಪರಿಶ್ರಮವೇ ಉಜ್ವಲ ಭವಿಷ್ಯಕ್ಕೆ ದಾರಿ

## ಬಿ.ಇಡಿ ಪ್ರಶಿಕ್ಷಣಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಎಸ್‌ಪಿ ರೋಹನ್ ಜಗದೀಶ್ ಮಾರ್ಗದರ್ಶನ



■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಆಧುನಿಕ ತಂತ್ರಜ್ಞಾನ ಹಾಗೂ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಉನ್ನತ ಗುರಿ ಹೊಂದಿ ಕಠಿಣ ಪರಿಶ್ರಮದಿಂದ ಅಧ್ಯಯನ ಮಾಡಿದಾಗ ಮಾತ್ರ ಉಜ್ವಲ ಭವಿಷ್ಯ ಸಾಧಿಸಲು ಸಾಧ್ಯ ಎಂದು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ರೋಹನ್ ಜಗದೀಶ್ ಹೇಳಿದರು.

ನಗರದ ವಿದ್ಯಾದಾನ ಸಮಿತಿಯ ಶ್ರೀಮತಿ ಎಂ.ಬಿ. ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯದಲ್ಲಿ ನಡೆದ ಬಿ.ಇಡಿ ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳ ಸ್ವಾಗತ ಸಮಾರಂಭ ಹಾಗೂ ವಿದ್ಯಾರ್ಥಿ ಒಕ್ಕೂಟ ಉದ್ಘಾಟನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನೂತನ ತಂತ್ರಜ್ಞಾನ ಕೌಶಲಗಳನ್ನು ಅಳವಡಿಸಿಕೊಳ್ಳುವ ಜೊತೆಗೆ ರಸ್ತೆ ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಶಿಸ್ತುಬದ್ಧ ಜೀವನ ನಡೆಸುವಂತೆ ಸಲಹೆ ನೀಡಿದರು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಜಯಶ್ರೀ ಕವಲೂರು ಅವರು ಮಾತನಾಡಿ, ಶಿಕ್ಷಕ ವೃತ್ತಿ ಪವಿತ್ರವಾದುದು. ಶಿಕ್ಷಕರು ಮಕ್ಕಳಲ್ಲಿ ಆತ್ಮವಿಶ್ವಾಸ ಬೆಳೆಸಿ, ಅವರ ಮಟ್ಟಕ್ಕೆ ಇಳಿದು ಪಾಠ ಮಾಡಬೇಕು ಎಂದು ತಿಳಿಸಿದರು. ಉತ್ತಮ ಸಂಸ್ಕಾರ ಮತ್ತು ನೈತಿಕತೆ ಬೆಳೆಸಿ ಆದರ್ಶ ಸಮಾಜ ನಿರ್ಮಾಣಕ್ಕೆ ಶಿಕ್ಷಕರು ಕಾರಣರಾಗಬೇಕು ಎಂದು ಹೇಳಿದರು. ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಗಂಗೂಬಾಯಿ ಪವಾರ ಅವರು ವಿದ್ಯಾರ್ಥಿ ಒಕ್ಕೂಟದ ಪದಾಧಿಕಾರಿಗಳಿಗೆ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸೂಚಿಸಿ, ತಮ್ಮ ಜೀವನ ಸಾಧನೆಯ ಅನುಭವಗಳನ್ನು ಹಂಚಿಕೊಂಡು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿದರು.

ಈ ಸಂದರ್ಭದಲ್ಲಿ ಕಳೆದ ವಾರ್ಷಿಕ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನು ಗಳಿಸಿದ ಕು. ಅಕ್ಷತಾ ಹಿರೇಮಠ ಅವರಿಗೆ ದಿ. ಜೆ.ಕೆ. ನಾಗರಕಟ್ಟೆ ಸ್ಮರಣಾರ್ಥ ಬಂಗಾರದ ಪದಕ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿದ್ಯಾದಾನ ಸಮಿತಿಯ ಅಧ್ಯಕ್ಷರಾದ ಶ್ರೀನಿವಾಸ ಹುಯಿಲಗೋಳ ವಹಿಸಿ, ವಿದ್ಯಾರ್ಥಿಗಳು ಸತತ ಅಧ್ಯಯನದ ಮೂಲಕ ಕಾಲೇಜಿಗೆ ಕೀರ್ತಿ ತರುವಂತೆ ಕರೆ ನೀಡಿದರು.

ಪ್ರಾರ್ಥನೆಯನ್ನು ಕು. ಮೇಘಾ ಮುದ್ದಿ ನೆರವೇರಿಸಿದರು. ಪ್ರೊ. ವಿ.ಪಿ. ಪಾಟೀಲ ಸ್ವಾಗತಿಸಿದರು. ಪ್ರೊ. ಡಾ. ಡಿ.ಎಲ್. ಪಾಟೀಲ ನಿರೂಪಿಸಿದರು. ಕೊನೆಗೆ ಪ್ರೊ. ಎನ್.ಜಿ. ಚನ್ನಪ್ಪಗೌಡ್ರ ವಂದಿಸಿದರು.

# ಎ.21ರಂದು ಶಂಕರಾಚಾರ್ಯ ಜಯಂತಿ ವ್ಯವಸ್ಥಿತವಾಗಿ ಆಚರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿಯನ್ನು ಎಪ್ರಿಲ್ 21ರಂದು ನಗರದ ಶ್ರೀ ಶಂಕರಾಚಾರ್ಯರ ಮಠದಲ್ಲಿ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆಗಳ ಮುದ್ರಣಕ್ಕೆ ಕ್ರಮ ಕೈಗೊಳ್ಳಬೇಕು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಹಿರಿಯರನ್ನು ಜಯಂತಿ ದಿನದಂದು ಸನ್ಮಾನಿಸಲಾಗುವುದು. ಜಗದ್ಗುರು ಶಂಕರಾಚಾರ್ಯರ ಕುರಿತು ಆಳವಾದ ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತದೆ ಎಂದು ತಿಳಿಸಿದರು.

ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯವಾದ ಎಲ್ಲಾ ವ್ಯವಸ್ಥೆಗಳು ಊಟೋಪಹಾರ, ವೇದಿಕೆ, ಸ್ಪರ್ಧೆಗಳ ಆಯೋಜನೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಎಂ.ಎನ್. ತುಂಬರಮಟ್ಟಿ, ರತ್ನಾಕರ್ ಭಟ್ ಜೋಶಿ, ಶ್ರೀನಿವಾಸ ಹುಯಿಲಗೋಳ, ಪ್ರೊ. ಅನಿಲ್ ವೈದ್ಯ, ಪ್ರೊ. ದತ್ತಪ್ರಸನ್ನ ಪಾಟೀಲ, ಗಿರೀಶ ಪಂತರ, ರವೀಂದ್ರ ಜೋಶಿ, ಪ್ರಾಣೇಶ ಕುಲಕರ್ಣಿ, ರವಿ ಪೂಜಾರ, ಅನಿಲ್ ತೆಂಬದಮನಿ, ದತ್ತಂಭಟ್ ತೆಂಬದಮನಿ, ದತ್ತಣ್ಣ ಜೋಶಿ, ನಾಗರಾಜ ಕುಲಕರ್ಣಿ, ಪ್ರಶಾಂತ ಪಾಟೀಲ, ಶ್ರೀಮತಿ ಸುಮನ್ ಪಾಟೀಲ, ಹೇಮಂತ ಕುಲಕರ್ಣಿ, ಶ್ರೀಮತಿ ಕಲಾವತಿ ಅಲಗೂರ ಸೇರಿದಂತೆ ಸಮಾಜದ ಗಣ್ಯರು ಮತ್ತು ಹಿರಿಯರು ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಅವರು ಸ್ವಾಗತಿಸಿ ವಂದಿಸಿದರು.



# ಅರಹಟ್ಟಿ ಜಾತ್ರಾ ಮಹೋತ್ಸವದಲ್ಲಿ ವಿಶ್ವ ಸರ್ವಧರ್ಮ ಸಮ್ಮೇಳನ

## ಮಹಾರಥೋತ್ಸವ ವೈಭವ – ಬಸವಣ್ಣನ ತತ್ವದ ಸಂದೇಶ



■ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಅರಹಟ್ಟಿ ಗ್ರಾಮದ ಶ್ರೀ ಜಗದ್ಗುರು ಮುರುಘರಾಜೇಂದ್ರ ಕೋರಣೇಶ್ವರ ವಿರಕ್ತಮಠದ ಆಶ್ರಯದಲ್ಲಿ ಜಾತ್ರಾ ಮಹೋತ್ಸವ ಅಂಗವಾಗಿ ವಿಶ್ವ ಸರ್ವಧರ್ಮ ಸಮ್ಮೇಳನ ಹಾಗೂ 6ನೇ ಮಹಾರಥೋತ್ಸವ ಭಕ್ತಿಭಾವದಿಂದ ಜರುಗಿತು.

ಶ್ರೀ ಮುರುಘರಾಜೇಂದ್ರ ಕೋರಣೇಶ್ವರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಈ ಸಮಾರಂಭದಲ್ಲಿ ವಿಶ್ವಗುರು ಬಸವಣ್ಣನವರ ತತ್ವ, ವಚನ ಸಾಹಿತ್ಯ ಮತ್ತು ಸರ್ವಧರ್ಮ ಸಮನ್ವಯದ ಸಂದೇಶವನ್ನು ಪ್ರಸಾರ ಮಾಡಲಾಯಿತು. ಅಲ್ಲಮಪ್ರಭುಗಳ ಶೂನ್ಯಪೀಠದ ಪರಂಪರೆಯನ್ನು ಸ್ಮರಿಸಿ, ಮಾನವೀಯತೆ ಹಾಗೂ ಅರಿವಿನ ಬೆಳಕನ್ನು ಹರಡುವ ಅಗತ್ಯತೆಯನ್ನು ಹೇಳಲಾಯಿತು.

ವಿವಿಧ ಮಠಾಧೀಶರು ಮತ್ತು ಸ್ವಾಮೀಜಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಧಾರ್ಮಿಕ ಉಪನ್ಯಾಸಗಳ ಮೂಲಕ ಭಕ್ತರಿಗೆ ಮಾರ್ಗದರ್ಶನ ನೀಡಿದರು. ಸಮಾರಂಭದಲ್ಲಿ ತುಲಾಭಾರ ಸೇವೆ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ನೆರವೇರಿದವು.

ಭಜನಾ ಸಂಘಗಳ ಭಕ್ತಿ ಗೀತೆಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಜಾತ್ರೆಗೆ ಇನ್ನಷ್ಟು ರಂಗ ತುಂಬಿದವು. ಸುತ್ತಮುತ್ತಲಿನ ಅನೇಕ ಗ್ರಾಮಗಳಿಂದ ಸಾವಿರಾರು ಭಕ್ತರು ಆಗಮಿಸಿ ಮಹಾರಥೋತ್ಸವದಲ್ಲಿ ಭಾಗವಹಿಸಿದರು.

ಅರಹಟ್ಟಿ ಸೇರಿದಂತೆ ಅಸೂಟಿ, ಕರಮುಡಿ, ಮೆಗೂರ, ಮೆಣಸಗಿ, ಕರ್ಕಿಕಟ್ಟಿ, ಕೊಣ್ಣೂರ, ಗುಳಗಂದಿ, ಖಾನಾಪೂರ, ಸುರಕೋಡ, ಕಡದಳ್ಳಿ ಸೇರಿದಂತೆ ಅನೇಕ ಗ್ರಾಮಗಳ ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಧಾರ್ಮಿಕ ಉತ್ಸವವನ್ನು ಯಶಸ್ವಿಗೊಳಿಸಿದರು.

ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಸೇವಾ ಕಾರ್ಯಗಳು ಹಾಗೂ ಭಕ್ತರಿಗೆ ಅನ್ನದಾಸೋಹ ವ್ಯವಸ್ಥೆಯೂ ಏರ್ಪಡಿಸಲಾಗಿತ್ತು.

ಸಮಾರಂಭದ ಅಂತ್ಯದಲ್ಲಿ ಸಮಸ್ತ ಭಕ್ತರಿಗೆ ಸ್ವಾಗತ ಕೋರಿ ಶರಣು ಶರಣಾರ್ಥಿಗಳೊಂದಿಗೆ ಕಾರ್ಯಕ್ರಮವನ್ನು ಸಮರ್ಪಿಸಲಾಯಿತು.

# ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಮುದಾಯದ ಕೈಜೋಡಿಕೆ ಅಗತ್ಯ

## ದಾಖಲಾತಿ ಹೆಚ್ಚಿಸುವ ಜಾಗೃತಿ ಶಿಬಿರದಲ್ಲಿ ಜಿ.ಎಂ. ಮುಂದಿನಮನಿ ಕರೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ಸಮುದಾಯದ ಸಕ್ರಿಯ ಸಹಭಾಗಿತ್ವ ಅಗತ್ಯವಾಗಿದ್ದು, ನಾವು ಶಾಲೆಗೆ ಒಂದಾದರೂ ಶಾಶ್ವತ ಹೆಜ್ಜೆಗುರುತು ಬಿಟ್ಟು ಹೋಗಬೇಕು ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪ ನಿರ್ದೇಶಕ ಹಾಗೂ ಪ್ರಾಂಶುಪಾಲರಾದ ಜಿ.ಎಂ. ಮುಂದಿನಮನಿ ಹೇಳಿದರು.

ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಗದಗ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಸಭಾಭವನದಲ್ಲಿ "2026–27ನೇ ಸಾಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸುವ ಕುರಿತು ಎಸ್‌ಡಿಎಂಸಿ ಸದಸ್ಯರಿಗೆ ಜಾಗೃತಿ ಶಿಬಿರ" ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಜಿ.ಎಂ. ಮುಂದಿನಮನಿ ಅವರು, "ನಾವು ಯಾರು? ಇಲ್ಲಿ ಏಕೆ ಬಂದಿದ್ದೇವೆ?



ನಮ್ಮ ಕರ್ತವ್ಯವೇನು?" ಎಂಬ ಪ್ರಶ್ನೆಗಳನ್ನು ಪ್ರತಿಯೊಬ್ಬರೂ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಹೇಳಿದರು.

ದಕ್ಷಿಣ ಕರ್ನಾಟಕದ ಜಿಲ್ಲೆಗಳು ಶಿಕ್ಷಣಕ್ಕೆ ನೀಡುತ್ತಿರುವ ಆದ್ಯತೆಯಿಂದ ಆರ್ಥಿಕ ಮತ್ತು ಸಾಮಾಜಿಕವಾಗಿ ಅಭಿವೃದ್ಧಿ ಹೊಂದಿವೆ. ಉತ್ತರ ಕರ್ನಾಟಕದಲ್ಲೂ ಅದೇ ರೀತಿಯ ಬದಲಾವಣೆ ಬರಬೇಕು. ಜಾತ್ರೆಗಳಿಗಿಂತ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ಮಕ್ಕಳು ಉನ್ನತ ಶಿಕ್ಷಣ ಪಡೆದು ಐಎಎಸ್, ಐಪಿಎಸ್ ಸೇರಿದಂತೆ ಉನ್ನತ ಹುದ್ದೆಗಳಿಗೆ ಏರಬೇಕು ಎಂದು ಆಶಿಸಿದರು.

2026–27ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳ ದಾಖಲಾತಿ ಹೆಚ್ಚಿಸುವುದು ಮುಖ್ಯ ಗುರಿಯಾಗಿದ್ದು, ಅಂಗನವಾಡಿಗಳಲ್ಲಿ ಇರುವ ಮಕ್ಕಳ ಸಂಖ್ಯೆ ಶಾಲೆಗೆ ಬರುವ ವೇಳೆಗೆ ಕಡಿಮೆಯಾಗುತ್ತಿರುವುದು ಆತಂಕಕಾರಿ ವಿಷಯವಾಗಿದೆ. ಪ್ರತಿಯೊಬ್ಬ ಎಸ್‌ಡಿಎಂಸಿ ಸದಸ್ಯರು ಕನಿಷ್ಠ ಒಬ್ಬ ಅಥವಾ ಇಬ್ಬರು ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು.

> "ಜಾತ್ರೆಗಳಿಗಿಂತ ಮಕ್ಕಳ ಶಿಕ್ಷಣವೇ ನಮ್ಮಿಗೆ ಮುಖ್ಯವಾಗಬೇಕು; ಸಮುದಾಯ ಕೈಜೋಡಿಸಿದರೆ ಸರ್ಕಾರಿ ಶಾಲೆಗಳು ಬಲವಾಗುತ್ತವೆ"
> – ಜಿ.ಎಂ. ಮುಂದಿನಮನಿ, ಪ್ರಾಂಶುಪಾಲರು.

ಸರ್ಕಾರಿ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ, ಬಿಸಿಯೂಟ, ವಿದ್ಯಾರ್ಥಿವೇತನ ಮತ್ತು ಅನುಭವಿ ಶಿಕ್ಷಕರಿರುವುದನ್ನು ಪ್ರಸ್ತಾಪಿಸಿದ ಅವರು, ಗದಗ ಜಿಲ್ಲೆ ಶಿಕ್ಷಣ ಕ್ಷೇತ್ರದಲ್ಲಿ ರಾಜ್ಯಕ್ಕೆ ಮಾದರಿಯಾಗಬೇಕು ಎಂದು ಹೇಳಿದರು.

ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷ ಅಬ್ದುಲ್ ಸಲಾಂ ಮಾತನಾಡಿ, ಶಿಕ್ಷಣ ವ್ಯವಸ್ಥೆ ಹಲವು ಹಂತಗಳನ್ನು ದಾಟಿ ಬಂದಿದೆ. ಸಂವಿಧಾನದ ಆಶಯದಂತೆ ಪ್ರತಿಯೊಬ್ಬ ಮಗುವಿಗೂ ಉಚಿತ ಮತ್ತು ಕಡ್ಡಾಯ ಶಿಕ್ಷಣ ದೊರಕಬೇಕು ಎಂದು ಹೇಳಿದರು.

2009ರ ಶಿಕ್ಷಣ ಹಕ್ಕು ಕಾಯ್ದೆಯ ಪ್ರಮುಖ ಕೊಡುಗೆ ಎಂದರೆ ಎಸ್‌ಡಿಎಂಸಿ ರಚನೆ. ಸಮಿತಿಯ ಸದಸ್ಯರಾಗುವುದಷ್ಟೇ ಸಾಕಾಗದೆ, ಶಾಲೆಯ ಮೂಲಭೂತ ಸೌಲಭ್ಯಗಳು ಹಾಗೂ ಶಿಕ್ಷಣದ ಗುಣಮಟ್ಟದ ಬಗ್ಗೆ ಪ್ರಶ್ನಿಸುವ ಹಕ್ಕು ಮತ್ತು ಹೊಣೆಗಾರಿಕೆ ನಮ್ಮದಾಗಿದೆ ಎಂದು ತಿಳಿಸಿದರು.

ಕುಂದಾಪುರ ತಾಲೂಕಿನ ಶಾಲೆಯೊಂದರಲ್ಲಿ ಸಮುದಾಯ ಮತ್ತು ಶಿಕ್ಷಕರು ಸೇರಿ ದಾಖಲಾತಿ ಹೆಚ್ಚಿಸಿದ ಯಶೋಗಾಥೆಯನ್ನು ಉಲ್ಲೇಖಿಸಿ, ಗದಗ ಜಿಲ್ಲೆಯಲ್ಲಿಯೂ ಅಂತಹ ಬದಲಾವಣೆ ತರಬೇಕು ಎಂದು ಆಶಿಸಿದರು. ಶಾಲೆಯ ಅಭಿವೃದ್ಧಿ ಮೂಲಕ ಸಮಾಜದ ಋಣ ತೀರಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಡಯಟ್ ಹಿರಿಯ ಉಪನ್ಯಾಸಕ ಬಿ.ಎಫ್. ಅರವಟಗಿ, ಉಪನ್ಯಾಸಕ ಶ್ರೀನಿವಾಸ ಕುಲಕರ್ಣಿ ಹಾಗೂ ಎಸ್‌ಡಿಎಂಸಿ ಸದಸ್ಯರು ಉಪಸ್ಥಿತರಿದ್ದರು.

# ಶಿಕ್ಷಕ ವೃತ್ತಿ ತ್ಯಾಗಮಯ– ವಿದ್ಯಾರ್ಥಿಗಳ ಯಶಸ್ಸೇ ನಿಜವಾದ ಸಂತೋಷ

## ನಿವೃತ್ತ ಶಿಕ್ಷಕರಿಗೆ ಸನ್ಮಾನ – ಅರಳಹಳ್ಳಿ ಗೌರವಕ್ಕೆ ಪಾತ್ರ



■ವಿಜಯಸಾಕ್ಷಿ ಸುದ್ದಿ, ಗದಗ


ಕೆ.ಜಿ. ಮುದಗಲ್ಲ ಪ್ರೌಢಶಾಲೆ, ಶಿಗ್ಲಿಯ ಮುಖ್ಯೋಪಾಧ್ಯಾಯರಾದ ಎಲ್.ಎಸ್. ಅರಳಹಳ್ಳಿ ಸೇರಿದಂತೆ ಹಲವು ನಿವೃತ್ತ ಶಿಕ್ಷಕರನ್ನು ಗದಗ–ಬೆಟಗೇರಿಯ ಸೇಂಟ್ ಜಾನ್ ಪ್ರೌಢಶಾಲೆಯಲ್ಲಿ ನಡೆದ ಸನ್ಮಾನ ಸಮಾರಂಭದಲ್ಲಿ ಗೌರವಿಸಲಾಯಿತು.

ಎಸ್‌ಎಸ್‌ಎಲ್‌ಸಿ ಕನ್ನಡ ಮೌಲ್ಯಮಾಪನ ಕೇಂದ್ರದಲ್ಲಿ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಗದಗ ಜಿಲ್ಲಾ ಉಪನಿರ್ದೇಶಕರಾದ ಆರ್.ಎಸ್. ಬುರಡಿ ಅವರು ಮಾತನಾಡಿ, ಶಿಕ್ಷಕ ಜೀವನವು ತ್ಯಾಗ ಮತ್ತು ಸಮರ್ಪಣೆಯಿಂದ ಕೂಡಿದ್ದು, ಶಿಕ್ಷಕರು ತಮ್ಮ ಸಮಯವನ್ನು ವಿದ್ಯಾರ್ಥಿಗಳ ಅಭಿವೃದ್ಧಿಗೆ ಮೀಸಲಿಡುತ್ತಾರೆ ಎಂದರು. ವಿದ್ಯಾರ್ಥಿಗಳ ಯಶಸ್ಸೇ ಶಿಕ್ಷಕರಿಗೆ ನಿಜವಾದ ಸಂತೋಷ ತರುತ್ತದೆ ಎಂದು ಹೇಳಿದರು.

ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವ್ಹಿ.ವ್ಹಿ. ನಡುವಿನಮನಿ ಮಾತನಾಡಿ, ಶಿಕ್ಷಕ ವೃತ್ತಿ ಗೌರವಯುತ ಹಾಗೂ ಹೊಣೆಗಾರಿಕೆಯದ್ದಾಗಿದ್ದು, ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕನ್ನಡ ವಿಷಯದ ಶಿಕ್ಷಕರಾಗಿ ನಿವೃತ್ತರಾದ ಎಂ.ಎಂ. ಹಳೆಪೇಟಿ, ಎಸ್.ಎನ್. ಗದ್ದಿ, ಎಸ್.ಎಚ್. ಶೆಟ್ಟಿನಾಯಕ, ಎಸ್.ಬಿ. ನಿಡಗುಂದಿ, ಜಿ.ಎಸ್. ಪಾಟೀಲ, ರೇಷ್ಮೆ ಮಿರೇಜಕರ್ ಹಾಗೂ ಎಲ್.ಎಸ್. ಅರಳಹಳ್ಳಿ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮೌಲ್ಯಮಾಪನ ಕೇಂದ್ರದ ಮುಖ್ಯಸ್ಥರಾದ ಎಸ್.ಎನ್. ಮುಲ್ಕಿಗೌಡ್ರ ವಹಿಸಿಕೊಂಡು ಮಾತನಾಡಿದರು. ಈ ಸಂದರ್ಭದಲ್ಲಿ ಶಿವಕುಮಾರ ಕುರಿ, ನೋಡಲ್ ಅಧಿಕಾರಿ ಎಚ್.ಬಿ. ರೆಡ್ಡೇರ, ಸಹ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಎಸ್. ಎಸ್. ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕ್ಷಮಾ ವಸ್ತ್ರದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### ಗಂಗಾಮತಸ್ಥರ ನೌಕರರ ಸಂಘಕ್ಕೆ ನಿರ್ದೇಶಕರಾಗಿ ಸಂಗಮೇಶ ಹಾದಿಮನಿ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಸೇವೆಯಲ್ಲಿ ನಿಸ್ವಾರ್ಥವಾಗಿ ತೊಡಗಿಸಿಕೊಂಡಿರುವ ಪ್ರೊ. ಸಂಗಮೇಶ ಹಾದಿಮನಿ ಅವರನ್ನು ಕರ್ನಾಟಕ ರಾಜ್ಯ ಗಂಗಾಮತಸ್ಥರ ನೌಕರರ ಕ್ಷೇಮಾಭಿವೃದ್ಧಿ ಸಂಘದ ಗದಗ ಜಿಲ್ಲಾ ಆಡಳಿತ ಮಂಡಳಿಯ ನಿರ್ದೇಶಕರಾಗಿ ಆಯ್ಕೆ ಮಾಡಲಾಗಿದೆ.

ಗದಗ ಜಿಲ್ಲೆಯ ಗಂಗಾಮತಸ್ಥರ ನೌಕರರ ಸಂಘಟನೆಯ ಗೌರವಾಧ್ಯಕ್ಷರಾದ ಬಿ.ಎನ್. ಯರನಾಳ ಅವರು ಮಾತನಾಡಿ, "ಜಿಲ್ಲೆಯ ಎಲ್ಲ ತಾಲ್ಲೂಕುಗಳ ಗಂಗಾಮತಸ್ಥರ ನೌಕರರು ಒಗ್ಗೂಡಿ ಸಂಘಟಿತರಾಗಿ, ಸಮುದಾಯದ ಸಾಮಾಜಿಕ ಅಭಿವೃದ್ಧಿಗಾಗಿ ಶ್ರಮಿಸಬೇಕು" ಎಂದು ಕರೆ ನೀಡಿದರು. ರಾಷ್ಟ್ರೀಯ ಮೀನುಗಾರರ ವಿಭಾಗದ ತಾಲೂಕ ಅಧ್ಯಕ್ಷರು ಹಾಗೂ ನಿಜಶರಣ ಅಂಬಿಗರ ಚೌಡಯ್ಯನವರ ಪತ್ತಿನ ಸಹಕಾರ ಸಂಘದ ನಿಯಮಿತ ಉಪಾಧ್ಯಕ್ಷರಾದ ಹರೀಶ ಬಾರಕೇರ ಅವರು ಮಾತನಾಡಿ, ಸಂಗಮೇಶ ಹಾದಿಮನಿ ಅವರು ಸಮುದಾಯದ ಬಡ ಕುಟುಂಬಗಳ ನೋವು-ನಲಿವುಗಳಿಗೆ ಸದಾ ಸ್ಪಂದಿಸುವ ಸ್ನೇಹಪರ ವ್ಯಕ್ತಿ. ಅವರ ಆಯ್ಕೆ ಸಮುದಾಯಕ್ಕೆ ಸಂತೋಷ ತಂದಿದೆ ಎಂದು ಹೇಳಿದರು.

ಸನ್ಮಾನ ಸಮಾರಂಭದಲ್ಲಿ ರಾಜ್ಯಾಧ್ಯಕ್ಷ ಶ್ರೀನಿವಾಸ ಅವರು ಪ್ರಮಾಣಪತ್ರ ನೀಡಿ ಪ್ರೊ. ಸಂಗಮೇಶ ಹಾದಿಮನಿ ಅವರನ್ನು ಸನ್ಮಾನಿಸಿದರು. ಗದಗ ಜಿಲ್ಲೆಯ ಗಂಗಾಮತಸ್ಥರ ಸಮುದಾಯದ ಹಿರಿಯರು, ಯುವಕರು ಹಾಗೂ ನೌಕರರ ವರ್ಗದಿಂದ ಅಭಿನಂದನೆಗಳು ವ್ಯಕ್ತವಾಗಿದವು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಉದಯ ಅಂಬಿಗೇರ, ಸುದೀಪ್ ಕಮತರ, ಮಂಜುನಾಥ ಗುಡಿಸಾಗರ, ಅಮಿತ ಪೂಜಾರ, ಜಗದೀಶ ಅಂಬಿಗೇರ, ದೇವಪ್ಪ ಕಟ್ಟಿಮನಿ ಸೇರಿದಂತೆ ಸಮುದಾಯದ ವಿವಿಧ ನಾಯಕರು ಉಪಸ್ಥಿತರಿದ್ದರು.

ತಂಬ್ರಹಳ್ಳಿ ಟಿಪಿಎಲ್ ಸೀಸನ್-2 ಭರ್ಜರಿ ಆರಂಭ- ಟಾಸ್ ಮಾಡಿ ಪಂದ್ಯಗಳಿಗೆ ಚಾಲನೆ ನೀಡಿದ ಜಿ.ಪಂ. ಮಾಜಿ ಸದಸ್ಯ ಅಕ್ಕಿ ತೋಟೇಶ್

# ಯುವಕರಿಗೆ ಕ್ರೀಡೆ ಜೊತೆಗೆ ಶಿಕ್ಷಣಕ್ಕೂ ಒತ್ತು ನೀಡಲು ಕರೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ತಂಬ್ರಹಳ್ಳಿ ಗ್ರಾಮದಲ್ಲಿ ಆಯೋಜಿಸಿರುವ ತಂಬ್ರಹಳ್ಳಿ ಪ್ರೀಮಿಯರ್ ಲೀಗ್ (ಟಿಪಿಎಲ್) ಸೀಸನ್-2 ಕ್ರಿಕೆಟ್ ಟೂರ್ನಿಗೆ ಶುಕ್ರವಾರ ಅದ್ದೂರಿಯಾಗಿ ಚಾಲನೆ ನೀಡಲಾಯಿತು.

ಈ ಕ್ರೀಡಾ ಮಹೋತ್ಸವಕ್ಕೆ ಉದ್ಘಾಟಕರಾಗಿ ಭಾಗವಹಿಸಿದ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಅಕ್ಕಿ ತೋಟೇಶ್ ಅವರು ಟಾಸ್ ಮಾಡಿ ಬ್ಯಾಟ್ ಬೀಸುವ ಮೂಲಕ ಪಂದ್ಯಗಳಿಗೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಗ್ರಾಮೀಣ ಮಟ್ಟದಲ್ಲಿ ಇಂತಹ ಕ್ರೀಡಾ ಟೂರ್ನಿಗಳು ನಡೆಯುವುದು ಸಂತೋಷಕರ ಸಂಗತಿ. ಕ್ರೀಡೆಗಳು ಯುವಕರಲ್ಲಿ ಶಿಸ್ತು, ಏಕತೆ ಮತ್ತು ಆತ್ಮವಿಶ್ವಾಸವನ್ನು ಬೆಳೆಸುತ್ತವೆ. ಯುವಕರ ಪ್ರತಿಭೆಯನ್ನು ಹೊರತೆಗೆದು ಮುಂದಿನ ಮಟ್ಟಕ್ಕೆ ಕೊಂಡೊಯ್ಯಲು ಇಂತಹ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಯುವಕರು ಕ್ರೀಡೆಗಳ ಜೊತೆಗೆ ಶಿಕ್ಷಣಕ್ಕೂ ಸಮಾನ ಮಹತ್ವ ನೀಡಿ ತಮ್ಮ ಭವಿಷ್ಯವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಈ ಟೂರ್ನಿಯಲ್ಲಿ ಹಲವು ತಂಡಗಳು ಭಾಗವಹಿಸಿದ್ದು, ಎಪ್ರಿಲ್ 10ರಿಂದ 13ರವರೆಗೆ ಪಂದ್ಯಗಳು ನಡೆಯಲಿವೆ. ವಿಜೇತ ತಂಡಕ್ಕೆ 30,000 ಹಾಗೂ ರನ್ನರ್ಸ್ ತಂಡಕ್ಕೆ 15,000 ನಗದು ಬಹುಮಾನ ಘೋಷಿಸಲಾಗಿದೆ.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಜಿ. ಗೌರೀಶ್, ಸುರೇಶ್ (ಪತ್ರಕರ್ತರು), ದೇವಪ್ರಸಾದ್ (ಗುತ್ತಿಗೆದಾರರು), ಗ್ರಾಮ ಪಂಚಾಯತಿ ಸದಸ್ಯರಾದ ಮೈಲಾರಪ್ಪ ಕಬಟಿ, ಸೊಬಟಿ ಹರೀಶ್, ಗೌಡ್ರು ಶಿವಕುಮಾರ್, ವೈ.ಕೆ. ಶ್ರೀನಿವಾಸ್ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಇದಲ್ಲದೆ ರಾಜಭಕ್ಷಿ, ರಾಜಸಾಬ್, ಪಿ. ಯಮನೂರಪ್ಪ, ದೇವರಾಜ್, ಜಿ.ಬಿ. ಸತೀಶ್, ಮರಿಸ್ವಾಮಿ, ಮರಿಯಪ್ಪ, ಪಿ.ಜಿ.ಎಂ. ರುದ್ರೇಶ್ ಸಾಗರ್, ಮಾಬು ಸಾಬ್ (ಅಧ್ಯಕ್ಷರು, ಕೃಷಿ ಸಹಕಾರ ಪತ್ತಿನ ಸಂಘ), ಮಂಜುನಾಥ ಬಳೆಗಾರ, ಕರಿಬಸವ, ರಮೇಶ್ ಹಾಗೂ ಊರಿನ ಕ್ರಿಕೆಟ್ ಅಭಿಮಾನಿಗಳು ಮತ್ತು ಮುಖಂಡರು ಉಪಸ್ಥಿತರಿದ್ದರು.

12 ತಿಂಗಳಿಂದ ಖಾಲಿ ಹುದ್ದೆ - ವಕ್ಫ್ ಆಸ್ತಿಗಳ ನಿರ್ವಹಣೆ ಹಾಗೂ ಸಮುದಾಯ ಅಭಿವೃದ್ಧಿ ಕುಂಠಿತ ಎಂಬ ಆತಂಕ

## ಗದಗ ಜಿಲ್ಲಾ ವಕ್ಫ್ ಸಲಹಾ ಸಮಿತಿಗೆ ಅಧ್ಯಕ್ಷರ ನೇಮಕಕ್ಕೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಕ್ಫ್ ಸಲಹಾ ಸಮಿತಿಯ ಅಧ್ಯಕ್ಷರ ಹುದ್ದೆ ಕಳೆದ 12 ತಿಂಗಳಿಂದ ಖಾಲಿಯಾಗಿರುವುದರಿಂದ ವಕ್ಫ್ ಆಸ್ತಿಗಳ ಸಮರ್ಪಕ ನಿರ್ವಹಣೆ ಮತ್ತು ಮುಸ್ಲಿಂ ಸಮುದಾಯದ ಅಭಿವೃದ್ಧಿಗೆ ತೊಂದರೆ ಉಂಟಾಗಿದೆ ಎಂದು ಅನ್ವರ ಶಿರಹಟ್ಟಿ ಹಾಗೂ ಕಂಬಾರ ಓಣಿ ಮುಸ್ಲಿಂ ಜಮಾತ್ ಸದಸ್ಯರು ಒತ್ತಾಯಿಸಿದ್ದಾರೆ.



ಜಿಲ್ಲಾ ವಕ್ಫ್ ಸಲಹಾ ಸಮಿತಿಯು ರಾಜ್ಯ ವಕ್ಫ್ ಮಂಡಳಿ ಮತ್ತು ಸಮುದಾಯದ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದ್ದು, ವಕ್ಫ್ ಆಸ್ತಿಗಳ ರಕ್ಷಣೆ, ಆಡಳಿತ, ಸರ್ವೇ, ದಾಖಲೆ ಸಂಗ್ರಹ, ಮೇಲ್ವಿಚಾರಣೆ ಹಾಗೂ ರಾಜ್ಯ ಮಂಡಳಿಗೆ ವರದಿ ಸಲ್ಲಿಸುವಂತಹ ಮಹತ್ವದ ಜವಾಬ್ದಾರಿಗಳನ್ನು ಹೊಂದಿದೆ. ಜೊತೆಗೆ ವಕ್ಫ್ ಆಸ್ತಿಗಳ ವ್ಯಾಜ್ಯಗಳಿಗೆ ಸಂಬಂಧಿಸಿದ ಕಾನೂನು ಸಹಾಯ ಒದಗಿಸುವುದು ಹಾಗೂ ಮುತವಲ್ಲಿಗಳ ನೇಮಕಾತಿಯ ಲೋಪದೋಷಗಳ ಕುರಿತು ವರದಿ ನೀಡುವುದೂ ಇದರ ಕರ್ತವ್ಯವಾಗಿದೆ.

ಗದಗ ಜಿಲ್ಲೆಯಲ್ಲಿ ಸುಮಾರು 250 ಜಮಾತ್‌ಗಳ ನಡುವೆ ಇರುವ ಬಿಕ್ಕಟ್ಟುಗಳನ್ನು ಪರಿಹರಿಸುವಲ್ಲಿ ಸಮಿತಿಯ ಪಾತ್ರ ಪ್ರಮುಖವಾಗಿದ್ದರೂ, ಅಧ್ಯಕ್ಷರ ನೇಮಕಾತಿ ಆಗದ ಹಿನ್ನೆಲೆಯಲ್ಲಿ ಈ ಕಾರ್ಯಗಳು ಪರಿಣಾಮಕಾರಿಯಾಗಿ ನಡೆಯುತ್ತಿಲ್ಲ ಎಂದು ಅನ್ವರ್ ಶಿರಹಟ್ಟಿ ತಿಳಿಸಿದ್ದಾರೆ.

ಜಿಲ್ಲೆಯ ಏಳು ತಾಲೂಕುಗಳಲ್ಲಿ ಅನೇಕ ವಕ್ಫ್ ಆಸ್ತಿಗಳಿದ್ದರೂ, ಖಬರಸ್ತಾನ, ಮಸೀದಿ, ದರ್ಗಾ ಸೇರಿದಂತೆ ವಿವಿಧ ಆಸ್ತಿಗಳ ದಾಖಲೆ ಸಂಗ್ರಹ ಹಾಗೂ ನಿರ್ವಹಣೆ ಸಮರ್ಪಕವಾಗಿಲ್ಲ. ನೋಂದಾಯಿತ ಜಮಾತ್‌ಗಳ ನಡುವಿನ ಸಮಸ್ಯೆಗಳು ನಿವಾರಣೆಯಾಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಅಧಿಕಾರಿಗಳನ್ನು ಸಂಪರ್ಕಿಸಿದಾಗ ಸೂಕ್ತ ಪ್ರತಿಕ್ರಿಯೆ ದೊರೆಯದಿರುವುದರ ಜೊತೆಗೆ, ಬೆಂಗಳೂರು ಮಟ್ಟದಲ್ಲಿ ಪರಿಹಾರ ಪಡೆಯಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಮುಸ್ಲಿಂ ಸಮುದಾಯದ ಶೈಕ್ಷಣಿಕ, ಸಾಮಾಜಿಕ ಹಾಗೂ ಧಾರ್ಮಿಕ ಪ್ರಗತಿಗೆ ಅಡ್ಡಿಯಾಗುತ್ತಿದೆ ಎಂದು ಆರೋಪಿಸಲಾಗಿದೆ.

ಜಮಾತ್ ಆಡಳಿತದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಸಮರ್ಪಕವಾಗಿ ಜಾರಿಯಾಗುತ್ತಿಲ್ಲ. ಅನೇಕ ಅನಕ್ಷರಸ್ಥರು ಆಡಳಿತ ಮಂಡಳಿಯಲ್ಲಿ ಇದ್ದು, ಕಾನೂನು ಹಾಗೂ ನಿಯಮಗಳ ಅರಿವು ಮೂಡಿಸಲು ಅಗತ್ಯವಾದ ತರಬೇತಿ ಕಾರ್ಯಕ್ರಮಗಳ ಕೊರತೆ ಇದೆ ಎಂದು ತಿಳಿಸಿದ್ದಾರೆ.

ಆದ್ದರಿಂದ ಗದಗ ಜಿಲ್ಲಾ ವಕ್ಫ್ ಸಲಹಾ ಸಮಿತಿಗೆ ಶೀಘ್ರವೇ ಅಧ್ಯಕ್ಷರನ್ನು ನೇಮಕ ಮಾಡುವಂತೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ನಿರ್ದೇಶನ ನೀಡಲು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ಹಾಗೂ ಇತರ ಜನಪ್ರತಿನಿಧಿಗಳು ಕ್ರಮ ಕೈಗೊಳ್ಳಬೇಕು ಎಂದು ಅನ್ವರ ಶಿರಹಟ್ಟಿ ಮನವಿ ಮಾಡಿದ್ದಾರೆ.

38 ಯೂನಿಟ್ ರಕ್ತ ಸಂಗ್ರಹ - ವಿದ್ಯಾರ್ಥಿಗಳಿಗೆ ಆರೋಗ್ಯ ಜಾಗೃತಿ, ರಕ್ತದಾನದ ಮಹತ್ವದ ಅರಿವು

## ಸರ್ಕಾರಿ ಕಾಲೇಜಿನಲ್ಲಿ ಉಚಿತ ಆರೋಗ್ಯ ತಪಾಸಣೆ-ರಕ್ತದಾನ ಶಿಬಿರ

"ಆರೋಗ್ಯ ವೃದ್ಧಿಗೆ ನಿಯಮಿತ ರಕ್ತದಾನ ಅವಶ್ಯ - ಪ್ರತಿಯೊಬ್ಬರೂ ಸಮಾಜ ಸೇವೆಯಲ್ಲಿ ಭಾಗವಹಿಸಬೇಕು"
- ಪ್ರೊ. ಶಿವಪ್ಪ ಎಂ. ಕುರಿ




■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಮತ್ತು ಸ್ನಾತಕೋತ್ತರ ಕೇಂದ್ರ, ಗದಗದಲ್ಲಿ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರ ಯಶಸ್ವಿಯಾಗಿ ನಡೆಸಲಾಯಿತು.

ಯುವ ರೆಡ್ ಕ್ರಾಸ್ (YRC), ರೆಡ್ ರಿಬ್ಬನ್ ಕ್ಲಬ್ (RRC), ರಾಷ್ಟ್ರೀಯ ಸೇವಾ ಯೋಜನೆ (NSS), ಎಚ್.ಕೆ. ಪಾಟೀಲ್ ವೈದ್ಯಕೀಯ ವಿಜ್ಞಾನ ಸಂಸ್ಥೆ (KHPIMS), ಜಿಮ್ಸ್ ರಕ್ತ ಭಂಡಾರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಹುಯಿಲಗೋಳ ಇವರ ಸಂಯುಕ್ತ ಆಶ್ರಯದಲ್ಲಿ ಈ ಶಿಬಿರ ಜರುಗಿತು.

ಶಿಬಿರದಲ್ಲಿ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ಮಧುಮೇಹ, ರಕ್ತದೊತ್ತಡ ಸೇರಿದಂತೆ ಸಾಮಾನ್ಯ ಆರೋಗ್ಯ ತಪಾಸಣೆ ನಡೆಸಲಾಯಿತು. ಜೊತೆಗೆ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳು ಒಟ್ಟು 38 ಯೂನಿಟ್ ರಕ್ತವನ್ನು ದಾನ ಮಾಡುವ ಮೂಲಕ ಸಮಾಜ ಸೇವೆಗೆ ಕೈಜೋಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಪ್ರಾಚಾರ್ಯ ಪ್ರೊ. ಶಿವಪ್ಪ ಎಂ. ಕುರಿ ಅವರು ರಕ್ತದಾನದ ಮಹತ್ವವನ್ನು ವಿವರಿಸಿ, ಆರೋಗ್ಯ ವೃದ್ಧಿಗಾಗಿ ನಿಯಮಿತವಾಗಿ ರಕ್ತದಾನ ಮಾಡುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಸರ್ವಜ್ಞನ ಆರೋಗ್ಯ ಸಂಬಂಧಿತ ವಚನವನ್ನು ಉಲ್ಲೇಖಿಸಿ ಆರೋಗ್ಯದ ಬಗ್ಗೆ ಜಾಗೃತರಾಗಿರಬೇಕು ಎಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಪ್ರಾಥಮಿಕ ಆರೋಗ್ಯ ಕೇಂದ್ರ ಹುಯಿಲಗೋಳದ ಹಿರಿಯ ವ್ಯವಸ್ಥಾಪಕರಾದ ಎನ್.ಎನ್. ಪಾಟೀಲ, ಜಿಮ್ಸ್ ರಕ್ತ ಭಂಡಾರದ ಕೌನ್ಸಿಲರ್ ಎಸ್.ಬಿ. ಪಾಟೀಲ, ಪ್ಯಾಥೋಲಾಜಿಸ್ಟ್ ಡಾ. ಶಕುಂತಲಾ ಅರಮನೆ ಸೇರಿದಂತೆ ವೈದ್ಯಕೀಯ ಸಿಬ್ಬಂದಿ ಉಪಸ್ಥಿತರಿದ್ದರು. ಡಾ. ಪವನ್, ಡಾ. ಪೂರ್ಣಿಮಾ, ಡಾ. ಲಕ್ಷ್ಮಿಕಾಂತ್, ಸ್ಟಾಫ್ ನರ್ಸ್ ಶ್ವೇತಾ ಉಳ್ಳಾಗಡ್ಡಿ ಸೇರಿದಂತೆ ವೈದ್ಯರು ಮತ್ತು ಸಿಬ್ಬಂದಿಗಳು ಶಿಬಿರದಲ್ಲಿ ಸೇವೆ ಸಲ್ಲಿಸಿದರು. ಮಹಾವಿದ್ಯಾಲಯದ ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದರು.

ಎನ್‌ಎಸ್‌ಎಸ್, ರೆಡ್ ಕ್ರಾಸ್ ಮತ್ತು ರೆಡ್ ರಿಬ್ಬನ್ ಘಟಕಗಳ ಸಂಚಾಲಕರಾದ ಡಾ. ಮಹಾದೇವ್ ವಡೇಕಾರ ಹಾಗೂ ಡಾ. ಕಸ್ತೂರಿ ದಳವಾಯಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಿರ್ವಹಿಸಿದರು.

ಐದು ತಿಂಗಳಿಂದ ಪಿಂಚಣಿ ಬಾಕಿ - ಜಿಲ್ಲಾಧಿಕಾರಿಗೆ ಜಯ ಕರ್ನಾಟಕ ಜನಪರ ವೇದಿಕೆ ಒತ್ತಾಯ

## ಹಿರಿಯ ನಾಗರಿಕರ ಪಿಂಚಣಿ ಬಿಡುಗಡೆಗೆ ಆಗ್ರಹಿಸಿ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಹಿರಿಯ ನಾಗರಿಕರಿಗೆ ಕಳೆದ ಐದು ತಿಂಗಳಿನಿಂದ ಸರ್ಕಾರದ ಪಿಂಚಣಿ ಹಣ ಬಂದಿಲ್ಲವೆಂದು ಆರೋಪಿಸಿ, ತಕ್ಷಣವೇ ಪಿಂಚಣಿ ಬಿಡುಗಡೆ ಮಾಡುವಂತೆ ಜಯ ಕರ್ನಾಟಕ ಜನಪರ ವೇದಿಕೆಯ ಗದಗ ಜಿಲ್ಲಾ ಘಟಕವು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ.

ವೇದಿಕೆಯ ರಾಜ್ಯ ಉಪಾಧ್ಯಕ್ಷರಾದ ಹಾಲಪ್ಪ ವರವಿ ಹಾಗೂ ಜಿಲ್ಲಾ ಅಧ್ಯಕ್ಷರಾದ ಸಣ್ಣಯಲಪ್ಪ ರಾಮಣ್ಣ ವಳಗೇರಿ ಅವರ ನೇತೃತ್ವದಲ್ಲಿ ಕಾರ್ಯಕರ್ತರು ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ಸಮಸ್ಯೆಯನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಾಲಪ್ಪ ವರವಿ ಅವರು, ಜಯ ಕರ್ನಾಟಕ ಜನಪರ ವೇದಿಕೆ ರಾಜ್ಯಾದ್ಯಂತ ಬಡವರು, ರೈತರು, ಮಹಿಳೆಯರು ಹಾಗೂ ಸಾಮಾನ್ಯ ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದು, ಸರ್ಕಾರ ಮತ್ತು ಜನರ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಗದಗ ಜಿಲ್ಲೆಯ ಹಿರಿಯ ನಾಗರಿಕರಿಗೆ ಸುಮಾರು ಐದು ತಿಂಗಳಿನಿಂದ ಪಿಂಚಣಿ ಹಣ ಬಾರದಿರುವುದರಿಂದ ಅವರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅನೇಕರು ತಾಲೂಕು ಕಚೇರಿಗಳಿಗೆ ಅಲೆದಾಡುತ್ತಾ ಬೇಸತ್ತಿದ್ದಾರೆ. 60 ವರ್ಷ ಮೇಲ್ಪಟ್ಟ ಹಿರಿಯರಿಗೆ ಪಿಂಚಣಿ ಜೀವನಾಧಾರವಾಗಿದ್ದು, ಔಷಧಿ, ಆಹಾರ ಸೇರಿದಂತೆ ಮೂಲಭೂತ ಅಗತ್ಯಗಳನ್ನು ಪೂರೈಸಲು ಕಷ್ಟವಾಗುತ್ತಿದೆ ಎಂದು ತಿಳಿಸಿದರು. ಆದ್ದರಿಂದ ತಕ್ಷಣವೇ ಬಾಕಿ ಪಿಂಚಣಿಯನ್ನು ಬಿಡುಗಡೆ ಮಾಡಿ ಹಿರಿಯ ನಾಗರಿಕರಿಗೆ ಸಹಾಯ ಮಾಡಬೇಕು ಎಂದು ಅವರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಅಂಬರೀಶ್ ಗಡ್ಡಿ, ಜಗದೀಶ್ ಕರಡಿಗುಡ್ಡ, ವೀರೇಶ್ ಹಿರೇಮಠ, ಮಾರುತಿ ಹೊಂಬಳ, ವೆಂಕಟೇಶ್ ಶಾಂತಗಿರಿ, ಸಂತೋಷ ವಡ್ಡರ, ಪ್ರಕಾಶ್ ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜಿಲ್ಲೆಯ ಪಿಯು ಸಾಧಕರು - ಕುಸಿತದ ಮಧ್ಯೆಯೂ ಮಿಂಚಿದ ಪ್ರತಿಭೆಗಳು

▶▶ಮೊದಲನೇ ಪುಟದಿಂದ

### ಡಿಡಿಪಿಯುಗೆ ಡಿಸಿ ನೋಟಿಸ್

ಜಿಲ್ಲೆಯ ಪಿಯುಸಿ ಫಲಿತಾಂಶ ಕುರಿತು ಮಾಧ್ಯಮಗಳಿಗೆ ತಪ್ಪು ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ಡಿಡಿಪಿಯು ಎಸ್.ಬಿ. ಮಸನಾಯಕ ಅವರಿಗೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಾರಣ ಕೇಳಿ ನೋಟಿಸ್ ನೀಡಿದ್ದಾರೆ. ಫಲಿತಾಂಶ ಪ್ರಕಟವಾದ ಬಳಿಕವೂ ಸಮಯಕ್ಕೆ ಸರಿಯಾಗಿ ಮಾಹಿತಿ ನೀಡದಿರುವುದು ಹಾಗೂ ಜಿಲ್ಲೆಯ ಸ್ಥಾನ ಕುರಿತು ತಪ್ಪು ಮಾಹಿತಿ ನೀಡಿರುವುದು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎನ್ನಲಾಗಿದೆ.


ದ್ವಿತೀಯ ಸ್ಥಾನ, ಮಲ್ಲಸಮುದ್ರದ ಮೊರಾರ್ಜಿ ದೇಸಾಯಿ ವಸತಿ ಕಾಲೇಜಿನ ರೇಖಾ ಕಣ್ಣೂರ 587 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ.

**ವಾಣಿಜ್ಯ ವಿಭಾಗ:** ಮುಂಡರಗಿ ಜೆಎ ಕಾಲೇಜಿನ ಪದ್ಮಪ್ರಿಯಾ ಶೆಟ್ಟರ್ ಹಾಗೂ ಗದಗ ತಾಲೂಕಿನ ಬಳಗಾನೂರ ಗ್ರಾಮದ ಚಿಕೇನಕೊಪ್ಪ ಶರಣರ ಕಾಲೇಜಿನ ಗೀತಾ ಹೂಗಾರ ಇಬ್ಬರೂ 590 (ಶೇ. 98.3) ಅಂಕಗಳೊಂದಿಗೆ ಪ್ರಥಮ ಸ್ಥಾನ ಹಂಚಿಕೊಂಡಿದ್ದಾರೆ.

ಗದಗ ಎಎಸ್‌ಎಸ್ ಕಾಲೇಜಿನ ವಿನೀತ ಬಂಡಾ, ಪ್ರಿಯಾಂಕಾ ಎಚ್ ಮತ್ತು ಆದಿತ್ಯ ರಾಯಬಾಗಿ ತಲಾ 589 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ.

## ನಿಧನ

### ಅಂಗಡಿ ರಾಚಪ್ಪ



**ಹಗರಿಬೊಮ್ಮನಹಳ್ಳಿ:** ತಾಲೂಕಿನ ಶಿವಾನಂದ ನಗರದ ನಿವಾಸಿ ಹಾಗೂ ತಾಲೂಕು ಬಣಜಿಗ ಸಂಘದ ಅಧ್ಯಕ್ಷರಾದ ಅಂಗಡಿ ರಾಚಪ್ಪ (60) ಅವರು ಶುಕ್ರವಾರ ನಿಧನರಾದರು.

ಮೃತರು ಪತ್ನಿ, ಓರ್ವ ಪುತ್ರಿ, ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಎಪ್ರಿಲ್ 11ರಂದು ಶನಿವಾರ ಮಧ್ಯಾಹ್ನ 12 ಗಂಟೆಗೆ ನೆರವೇರಿಸಲಾಗುತ್ತದೆ ಎಂದು ಕುಟುಂಬದವರು ತಿಳಿಸಿದ್ದಾರೆ.

## ಮಹಿಳೆಯರಿಗೆ ಗುಡ್ ನ್ಯೂಸ್ ಕೊಟ್ಟ ತೆಲಂಗಾಣ ಸರ್ಕಾರ

■ವಿಜಯಸಾಕ್ಷಿ ಸುದ್ದಿ, ಹೈದರಾಬಾದ್

ತೆಲಂಗಾಣ ಸರ್ಕಾರವು ಈ ವರ್ಷವೂ ಮಹಿಳೆಯರಿಗೆ ಉಚಿತ ಸೀರೆ ವಿತರಣಾ ಯೋಜನೆಯನ್ನು ಮುಂದುವರಿಸಲು ನಿರ್ಧರಿಸಿದೆ.

ಈ ಬಾರಿ ಸೀರೆಗಳಿಗೆ ಹೊಸ ಬಣ್ಣ ಮತ್ತು ವಿನ್ಯಾಸವನ್ನು ಪರಿಚಯಿಸಲಾಗಿದ್ದು, ನೀಲಿ ಸೀರೆಗಳ ಬದಲು ಗಿಳಿ ಹಸಿರು ಬಣ್ಣಕ್ಕೆ ಕೆಂಪು ಜರಿ ಇರುವ ಸೀರೆಗಳನ್ನು ವಿತರಿಸಲು ತೀರ್ಮಾನಿಸಲಾಗಿದೆ.

ಅಧಿಕಾರಿಗಳ ಪ್ರಕಾರ, ಈ ಯೋಜನೆಗಾಗಿ ಸುಮಾರು 450 ಕೋಟಿ ರೂ. ವೆಚ್ಚದಲ್ಲಿ 1 ಕೋಟಿ ಸೀರೆಗಳ ಉತ್ಪಾದನೆಗೆ ಟೆಸ್ಕೋಗೆ ಆದೇಶ ನೀಡಲಾಗಿದೆ. ಕಳೆದ ವರ್ಷವೂ ಇದೇ ಯೋಜನೆಯಡಿ ಸುಮಾರು 86 ಲಕ್ಷ ಸೀರೆಗಳನ್ನು ವಿತರಿಸಲಾಗಿತ್ತು.

ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಅವರ ನಿರ್ದೇಶನದಂತೆ ಪ್ರತಿ ವರ್ಷ ವಿಭಿನ್ನ ಬಣ್ಣ ಮತ್ತು ವಿನ್ಯಾಸದ ಸೀರೆಗಳನ್ನು ನೀಡುವ ಯೋಜನೆ ಜಾರಿಗೆ ತರಲಾಗುತ್ತಿದೆ.

ಕರ್ನಾಟಕ ಸರ್ಕಾರ

**ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ-582101**

ಜಿಲ್ಲಾ : ಗದಗ ರಾಜ್ಯ : ಕರ್ನಾಟಕ
ದೂ : 08372-259932 ಇ-ಮೇಲ್ : ka.gadag.betageri.cmc@gmail.com
ನಂ.ಗಬೆನಸ/ತಾಂ.ವಿ/ವಹಿ/ಟೆಂಡರ್/2025-26 ದಿನಾಂಕ : 24-03-2026

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999-2000 ರ ಪ್ರಕಾರ ಸ್ಟ್ಯಾಂಡರ್ಡ್ ಟೆಂಡರ್ ಡ್ಯಾಕ್ಯೂಮೆಂಟ್ಸ್ ನಿಯಮದನ್ವಯ ಗದಗ-ಬೆಟಗೇರಿ ನಗರಸಭೆಯ ಸನ್ 2025-26 ನೇ ಸಾಲಿನ ನಗರಸಭೆ ಅನುದಾನ ಒಟ್ಟು 06 ಕಾಮಗಾರಿಗಳಿಗೆ ಟೆಂಡರ್‌ಗಿಟ್ಟ ಮೊಟ್ಟ ರೂ. 37.65 ಲಕ್ಷಗಳಿಗೆ ಟೆಂಡರ್ ಆಹ್ವಾನಿಸಿದ್ದು, ಆಸಕ್ತರು ಇ-ಸಂಗ್ರಹಣಾ ವೇದಿಕೆಯಡಿ ಇಂಡೆಂಟ್ ನಂ: **(1) DMA/2025-26/OW/WORK INDENT-55979 (Others) (2) DMA/2025-26/OW/WORK INDENT-55977 (Others) (3) DMA/2025-26/OW/WORK INDENT-56370 (Others) (4) DMA/2025-26/OW/WORK INDENT-55974 (CAT-II ( A) (5) DMA/2025-26/OW/WORK INDENT-56369 (SC) (6) DMA/2025-26/OW/WORK INDENT-55973 (ST) http://kcppp.karnataka.gv.in** ರಲ್ಲಿ ಸಂಪರ್ಕಿಸಿ ಟೆಂಡರ್ ಸಲ್ಲಿಸಬಹುದಾಗಿದೆ.

ಅದರಂತೆ ಬಿಡ್‌ದಾರರು ಟೆಂಡರ್ ವಿವರಗಳನ್ನು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಪಡೆದು ಸಂಬಂಧಿಸಿದ ಇಎಂಡಿ ಟೆಂಡರ್ ಫೀಗಳನ್ನು **Electronic** ಪದ್ಧತಿಯಲ್ಲಿ ತುಂಬಿ ನಿಗಧಿಪಡಿಸಿದ ದಿನಾಂಕಗಳೊಳಗಾಗಿ ಟೆಂಡರ್ ಸಲ್ಲಿಸಬಹುದಾಗಿದೆ.

| | |
|---|---|
| ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ: | 20-04-2026 Up to 16.00 Hours |
| ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ (Technical Bids) | 21-04-2026 Up to 16.30 Hours |

ಸದರಿ ಟೆಂಡರ್‌ಗೆ ಸಂಬಂಧಿಸಿದ ದಿನಾಂಕ ಹಾಗೂ ಇತರೆ ಬದಲಾವಣೆಗಳಾದಲ್ಲಿ **kppp portal** ನಲ್ಲಿ ಪ್ರಕಟಿಸಲಾಗುವುದು. ಪತ್ರಿಕಾ ಪ್ರಕಟಣೆಯಲ್ಲಿ ಪ್ರಕಟಿಸಲಾಗುವುದಿಲ್ಲ.

ಸಹಿ/-
**ಪೌರಾಯುಕ್ತರು, ಗದಗ-ಬೆಟಗೇರಿ ನಗರಸಭೆ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka